ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

EMAIL : dairyadadaari@gmail.com ಸಂಪುಟ: 01 ಸಂಚಿಕೆ: 63

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಗುರುವಾರ: 12-02-2026


## ಅಭಿಷೇಕ್ ಆಸ್ಪತ್ರೆಗೆ ದಾಖಲು: ಭಾರತಕ್ಕೆ ಹಿನ್ನಡೆ



**ನವದೆಹಲಿ,ಫೆ.11–** ಹೊಟ್ಟೆ ನೋವಿನ ಸೋಂಕಿನಿಂದ ಬಳಲುತ್ತಿರುವ ಭಾರತೀಯ ಕ್ರಿಕೆಟ್ ತಂಡದ ಸ್ಫೋಟಕ ಬ್ಯಾಟರ್ ಅಭಿಷೇಕ್ ಶರ್ಮಾ ಅವರನ್ನು ದೆಹಲಿಯ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಇದರಿಂದಾಗಿ ಪ್ರಸ್ತುತ ನಡೆಯುತ್ತಿರುವ ಟಿ-20 ವಿಶ್ವಕಪ್ ಗೆ ಭಾರತಕ್ಕೆ ಹಿನ್ನಡೆಯಾಗಿದೆ.

ಮೂಲಗಳ ಪ್ರಕಾರ, ಅಭಿಷೇಕ್ ಅವರ ಆರೋಗ್ಯ ಹಠಾತ್ತನೆ ಹದಗೆಟ್ಟ ನಂತರ ಅವರನ್ನು ಆಸ್ಪತ್ರೆಗೆ ಕರೆದೊಯ್ಯಲಾಯಿತು. ಆರಂಭಿಕ ಪರೀಕ್ಷೆಗಳಲ್ಲಿ ಹೊಟ್ಟೆಯ ಸೋಂಕು ದೃಢಪಟ್ಟಿತು, ನಂತರ ವೈದ್ಯಕೀಯ ತಂಡವು ಅವರನ್ನು ವೀಕ್ಷಣೆಯಲ್ಲಿಡಲು ನಿರ್ಧರಿಸಿದೆ.

ಸೋಮವಾರ ರಾತ್ರಿಯವರೆಗೂ ಅವರು ಆಸ್ಪತ್ರೆಯಲ್ಲಿಯೇ ಇದ್ದರು ಮತ್ತು ಅವರ ಸ್ಥಿತಿಯನ್ನು ಮೇಲ್ವಿಚಾರಣೆ ಮಾಡಲಾಗುತ್ತಿತ್ತು. ಅವರ ಆರೋಗ್ಯ 2ನೇಪುಟಕ್ಕೆ

### ಕಂದಾಯ ಇಲಾಖೆಯ ಪ್ರಗತಿ ಪರಿಶೀಲನಾ

## ಕಂದಾಯ ಇಲಾಖೆಯ ಕಾರ್ಯಕ್ರಮಗಳ ಸಮರ್ಪಕ ಅನುಷ್ಠಾನಕ್ಕೆ ಶ್ರಮಿಸಿ: ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್ ಸೂಚನೆ

ಧೈರ್ಯದ ದಾರಿ

**ರಾಯಚೂರು ಫೆ,11–** ಕಂದಾಯ ಇಲಾಖೆಯಲ್ಲಿ ಅನೇಕ ಸುಧಾರಣೆಗಳನ್ನು ತರಲಾಗಿದ್ದು, ಇಲಾಖೆಯಲ್ಲಿನ ಸಾರ್ವಜನಿಕ ಸ್ನೇಹಿ ಎಲ್ಲ ಕಾರ್ಯಕ್ರಮಗಳ ಸರಿಯಾದ ಅನುಷ್ಠಾನಕ್ಕೆ ಹೆಚ್ಚಿನ ಒತ್ತು ಕೊಡಬೇಕು ಎಂದು ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಫೆ.11ರಂದು ನಡೆದ ಕಂದಾಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಂದಾಯ ಇಲಾಖೆಯಲ್ಲಿ ಮೊದಗಿಲಿಗಿಂತ ಅತೀ ಹೆಚ್ಚು ಬದಲಾವಣೆಯಾಗಿದೆ. ಮಹತ್ವದ ಎಲ್ಲ ಕಡತಗಳನ್ನು ಡಿಜಿಟಲ್ ವ್ಯವಸ್ಥೆಗೆ ಮಾರ್ಪಡಿಸಲಾಗುತ್ತಿದೆ. ಇದರಿಂದಾಗಿ ಸಾರ್ವಜನಿಕರಿಗೆ ಪ್ರತಿಯೊಂದು ಮಾಹಿತಿಯು ಕ್ಷಣಾರ್ಧದಲ್ಲಿ ದೊರೆಯುವಂತಾಗಿದೆ. ಅದರಂತೆ ಕಂದಾಯ ಇಲಾಖೆಯ ಯೋಜನೆಗಳು, ಕಾರ್ಯಕ್ರಮಗಳ ಕುರಿತು ಮಾಹಿತಿಯನ್ನು ಕಂದಾಯ ಇಲಾಖೆಯ ಕಚೇರಿಗಳಲ್ಲಿ ಪ್ರದರ್ಶನ ಮಾಡಬೇಕು.




ಮೃತರ ಹೆಸರಲ್ಲಿರುವ ಜಮೀನುಗಳನ್ನು ವಾರಸುದಾರರಿಗೆ ನೋಂದಣಿ ಮಾಡಿಕೊಡಲು ಕಂದಾಯ ಇಲಾಖೆಯಿಂದ ರೈತರ ಮನೆ ಬಾಗಿಲಿಗೇ ಇ-ಪೌತಿ ಆಂದೋಲನದಡಿ ಜಿಲ್ಲೆಯಲ್ಲಿ ಬಾಕಿ ಇರುವ ಅರ್ಜಿಗಳನ್ನು ವಿಲೇವಾರಿ ಮಾಡಬೇಕು. ಈ ಬಗ್ಗೆ ಪ್ರತಿಯೊಂದು ಗ್ರಾಮಗಳಲ್ಲಿ ಮಾಹಿತಿ ನೀಡಿ ಜಾಗೃತಿ ಮೂಡಿಸಬೇಕು ಎಂದು ಅವರು ಸೂಚನೆ ನೀಡಿದರು.

ಜಿಲ್ಲೆಯ ವಿವಿಧ ನ್ಯಾಯಾಲಯಗಳಲ್ಲಿ ಕಂದಾಯ ಇಲಾಖೆಗೆ ಸಂಬಂಧಿಸಿದಂತೆ ದಾಖಲಾದ ಅರೆ ನ್ಯಾಯಿಕ ಪ್ರಕರಣಗಳನ್ನು ಬೇಗನೇ ಇತ್ಯರ್ಥಪಡಿಸಬೇಕು. ಕಂದಾಯ ದಾಖಲೆಗಳ ಡಿಜಿಟಲೀಕರಣಕ್ಕಾಗಿ ಜಿಲ್ಲೆಯಲ್ಲಿ ಈಗಾಗಲೇ ಲಕ್ಷಕ್ಕೂ ಹೆಚ್ಚು ಫೈಲ್‌ಗಳನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲಾಗಿದೆ. ಈ ಕಾರ್ಯ ಇನ್ನಷ್ಟು ವೇಗವಾಗಬೇಕು ಎಂದು ಅವರು ನಿರ್ದೇಶನ ನೀಡಿದರು.

ಆಯಾ ತಾಲೂಕುಗಳ ತಹಶೀಲ್ದಾರರು ಸಾರ್ವಜನಿಕರ ದಾಖಲೆಗಳನ್ನು ಸಂರಕ್ಷಿಸುವಲ್ಲಿ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು. ಸಾರ್ವಜನಿಕರ ಎಲ್ಲಾ ದಾಖಲೆಗಳನ್ನು ಡಿಜಿಟಲೀಕರಣ ಮಾಡುವುದು ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಯಾಗಿದ್ದು, ಇದರಿಂದ ಕುಳಿತಲ್ಲಿಯೇ ಬೆರಳ ತುದಿಯಲ್ಲಿ ಸಾರ್ವಜನಿಕರ ಆಕಾರ ಬಂದಿ, ಮ್ಯೂಟೇಷನ್, ಪಹಣಿ ಸೇರಿದಂತೆ ಎಲ್ಲವನ್ನೂ ಪಡೆಯಬಹುದಾಗಿದೆ. ಆದ್ದರಿಂದ ಜನರ ದಾಖಲೆಗಳ ಸಂರಕ್ಷಣೆಗೆ ಅಧಿಕಾರಿಗಳು ಹೆಚ್ಚಿನ ಒತ್ತು ಕೊಡಬೇಕು ಎಂದು ತಿಳಿಸಿದರು.

ರೆಕಾರ್ಡ್ ರೂಮ್‌ಗಳ ನಿರ್ವಹಣೆ ಸರಿಯಾಗಿ ಇರಬೇಕು. ಅನುಪಯುಕ್ತ ಮತ್ತು ಅನಗತ್ಯ ವಸ್ತುಗಳನ್ನು ಬೇಗನೇ ವಿಲೇ ಮಾಡಬೇಕು. ದಾಖಲೆಗಳನ್ನು ಸರಿಯಾದ ರೀತಿಯಲ್ಲಿ ಹಾಗೂ ಸೂಕ್ಷ್ಮವಾಗಿ ನಿರ್ವಹಣೆ ಮಾಡುವ ಜವಾಬ್ದಾರಿ ಪ್ರತಿಯೊಬ್ಬ ಅಧಿಕಾರಿ ಮೇಲಿದೆ. ಯಾವ ಯಾವ ದಾಖಲೆಗಳಿಗೆ ಯಾವ ಯಾವ ಬಣ್ಣ ಬಳಸಬೇಕೆಂದು 2ನೇಪುಟಕ್ಕೆ

## ಜೀತ ಪದ್ಧತಿ ನಿರ್ಮೂಲನೆಗೆ ಕೈಜೋಡಿಸಿ: ನ್ಯಾ.ಹೆಚ್.ಎ.ಸಾತ್ವಿಕ್ ಸಲಹೆ

ಧೈರ್ಯದ ದಾರಿ

**ರಾಯಚೂರು ಫೆ,11–** ಜೀತ ಪದ್ಧತಿಯು ದೊಡ್ಡದಾದ ಸಾಮಾಜಿಕ ಪಿಡುಗಾಗಿದ್ದು, ಇದರ ನಿರ್ಮೂಲನೆಗಾಗಿ ಎಲ್ಲರು ಕೈಜೋಡಿಸಬೇಕೆಂದು ಗೌರವಾನ್ವಿತ ಹಿರಿಯ ಶ್ರೇಣಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಎ.ಸಾತ್ವಿಕ್ ಅವರು ಹೇಳಿದರು.

ಫೆ.10ರ ಮಂಗಳವಾರ ದಂದು ತಾಲೂಕಿನ ಚಂದ್ರಬಂಡಾ ರಸ್ತೆಯ ಕಡ್ಗಂದೊಡ್ಡಿ ವ್ಯಾಪ್ತಿಯ ವಿ.ಬಿ.ಎಸ್ ಇಟ್ಟಿಗೆ ಭಟ್ಟಿಯಲ್ಲಿ ಜೀತ ಪದ್ಧತಿ ನಿರ್ಮೂಲನೆ ದಿನಾಚರಣೆ ಅಂಗವಾಗಿ ಕಾನೂನು ಅರಿವು ನೆರವು ಕಾರ್ಯಕ್ರಮಕ್ಕೆ ಸಸಿಗೆ ನೀರು ಎರೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಜೀತ ಪದ್ಧತಿಗೆ ಬಡತನವೇ ಮೂಲ ಕಾರಣವಾಗಿದೆ. ಕಾರ್ಮಿಕರಿಗಾಗಿಯೇ ಇರುವ ಕಾಯ್ದೆ ಕಾನೂನುಗಳನ್ನು ಅರಿಯುವುದು ಅತ್ಯಂತ ಮಹತ್ವವಾಗಿದ್ದು, ಕಾರ್ಮಿಕರಿಗಾಗಿಯೇ ಲಭ್ಯವಿರುವ ಉಚಿತ ಕಾನೂನು ಸಲಹೆ ಮತ್ತು ಸೇವೆಗಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರವನ್ನು ಸಂಪರ್ಕಿಸಬೇಕು. ಹಾಗೂ ತೊಂದರೆಯಾದಲ್ಲಿ ಸಹಾಯವಾಣಿ ಸಂಖ್ಯೆ 15100ಗೆ ಕರೆ ಮಾಡಿ ಕಾನೂನು ಸೇವೆಗಳನ್ನು ಪಡೆದುಕೊಳ್ಳಬಹುದು ಎಂದರು.

ಕಾರ್ಮಿಕ ಇಲಾಖೆಯ ಜಿಲ್ಲಾ ಅಧಿಕಾರಿ ಆರತಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಯಾರಾದರೂ ಎಲ್ಲಿಯಾದರೂ ಉದ್ಯೋಗ ಅವಕಾಶ ಪಡೆಯಲು ನಮಗೆ ಸಂವಿಧಾನಬದ್ಧ ಹಕ್ಕು ಇರುತ್ತದೆ. ಕೆಲಸ ಅರಸಿ ಬರುವ ಪ್ರತಿಯೊಬ್ಬರಿಗೂ ಉತ್ತಮ ಜೀವನ ಕಲ್ಪಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದರು.

ಓಡಿಸ್ಸಾ, ಬಿಹಾರ, ಆಂಧ್ರ, ಮಹಾರಾಷ್ಟ್ರ ಮತ್ತು ಇತರೆ ಹೊರ ರಾಜ್ಯಗಳಿಂದ ವಲಸೆ ಕಾರ್ಮಿಕರು ವಲಸೆ ಬಂದು ಇಟ್ಟಿಗೆ ಭಟ್ಟಿಗಳಲ್ಲಿ, ಬೀದಿ ಬದಿಯಲ್ಲಿ, ಕಟ್ಟಡ ಮತ್ತು ಇತರೆ ನಿರ್ಮಾಣ ಕೆಲಸಗಳಲ್ಲಿ ಹತ್ತಿ ಮಿಲ್, ರೈಸ್ ಮಿಲ್ ಕೆಲಸದಲ್ಲಿ ತೊಡಗಿಸಿಕೊಂಡಿರುವುದು ಕಂಡುಬರುತ್ತಿದೆ. ಈ ಜನತೆಗೆ ಕಾನೂನಾತ್ಮಕ ಹಕ್ಕುಗಳು ಹಾಗೂ ಸೌಲಭ್ಯಗಳನ್ನು ಪಡೆಯುವಂತೆ ಸಲಹೆ ನೀಡಿ, ಮಾಲೀಕರಿಗೆ ಕಾರ್ಮಿಕರನ್ನು ಜೀತಪದ್ಧತಿಯಲ್ಲಿ ತೊಡಗಿಸಿಕೊಳ್ಳದಂತೆ ಹಾಗೂ ಮಕ್ಕಳನ್ನು ಬಾಲ ಹಾಗೂ ಕಿಶೋರ ಕಾರ್ಮಿಕರನ್ನಾಗಿಸದೇ ಹತ್ತಿರದ ಅಂಗನವಾಡಿ ಮತ್ತು



ಶಾಲೆಗೆ ಸೇರಿಸಿ ಕಡ್ಡಾಯವಾಗಿ ಶಿಕ್ಷಣವನ್ನು ನೀಡುವಂತೆ ಸೂಚಿಸಿದರು.

ಈ ವೇಳೆ ರಾಯಚೂರು 1 ಹಾಗೂ 2ನೇ ಕಾರ್ಮಿಕ ವೃತ್ತ ನಿರೀಕ್ಷಕರಾದ ಕುಮಾರಿ ಪ್ರಿಯಾಂಕ ಅವರು ಮಾತನಾಡಿ, ಜೀತ ಪದ್ಧತಿ ನಿರ್ಮೂಲನೆಗಾಗಿ 1976ರಲ್ಲಿ ಕಾಯ್ದೆ ಜಾರಿ ಬಂದಿರುವ ಕುರಿತು ಜೀತ ಪದ್ಧತಿ ನಿರ್ಮೂಲನೆ ಕುರಿತು ಪ್ರತಿಜ್ಞಾ ವಿಧಿ ಬೋಧಿಸಿದರು.ಇದೇ ಸಂದರ್ಭದಲ್ಲಿ ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ರಿಯಾಜ್ ಪಟೇಲ್ ವರ್ಕನಳ್ಳಿ, ಇಟ್ಟಿಗೆ ಭಟ್ಟಿ ಮಾಲೀಕರಾದ ಈರಣ್ಣ ಸೇರಿದಂತೆ ಕಾರ್ಮಿಕ ಇಲಾಖೆಯ ಸಿಬ್ಬಂದಿ ಹಾಗೂ ಸ್ಥಳೀಯ ವಿವಿಧ ಇಟ್ಟಿಗೆ ಭಟ್ಟಿಗೆಗಳ ಮಾಲೀಕರು ಮತ್ತು ಕಾರ್ಮಿಕರು ಇದ್ದರು.

## ನಿಧಾನವಾದರೂ ಸಿಎಂ ಸಿದ್ದರಾಮಯ್ಯನವರು ಕೊಟ್ಟ ಮಾತಿನಂತೆ ನಡೆದುಕೊಳ್ಳುತ್ತಾರೆ : ಕುತೂಹಲ ಕೆರಳಿಸಿದ ಡಿ.ಕೆ.ಸುರೇಶ್

**ಬೆಂಗಳೂರು,ಫೆ.11–** ನಿಧಾನವಾದರೂ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕೊಟ್ಟ ಮಾತಿನಂತೆ ನಡೆದುಕೊಳ್ಳುತ್ತಾರೆ ಎಂದು ಹೇಳುವ ಮೂಲಕ ಮಾಜಿ ಸಂಸದ ಡಿ.ಕೆ.ಸುರೇಶ್ ಅವರು ರಾಜ್ಯ ರಾಜಕೀಯದಲ್ಲಿ ಚರ್ಚೆಯನ್ನು ಹುಟ್ಟುಹಾಕಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪುತ್ರ ಹಾಗೂ ವಿಧಾನಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯ ಅವರ ಹೇಳಿಕೆ ಬಗ್ಗೆ ತಿರುಗೇಟು ನೀಡುವಂತೆ ಮಾತನಾಡಿರುವ ಅವರು, ಅಧಿಕಾರ ಹಂಚಿಕೆ ವಿಚಾರವನ್ನು ಮತ್ತೊಮ್ಮೆ ಪ್ರಸ್ತಾಪಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೊಟ್ಟ ಮಾತನ್ನು ಉಳಿಸಿಕೊಳ್ಳುತ್ತಾರೆಂಬ ಭರವಸೆ ಇದೆ. ಮುಂದೆ ಎಲ್ಲವನ್ನೂ ಕಾಲವೇ ಉತ್ತರಿಸುತ್ತದೆ, ಒಳ್ಳೆಯದಾಗಲಿದೆ ಎಂದು ಭಾವಿಸಿದ್ದೇನೆ ಎಂದು ಹೇಳಿದರು.

ಯತೀಂದ್ರ ಅವರು ಹೇಳಿದ ಮೇಲೆ ಅದೇ ವೇದವಾಕ್ಯ. ಅವರು ಯಾವ ವಿಚಾರ, ಏನು ಹೇಳಿದ್ದಾರೆ ಎಂಬುದು ಗೊತ್ತಿಲ್ಲ. ಅವರೇ ಹೈಕಮಾಂಡ್ ಅಲ್ಲವೇ ಎಂದು ವ್ಯಂಗ್ಯವಾಡಿದರು.

ಶಾಸಕ ಇಕ್ಬಾಲ್ ಹುಸೇನ್ ಹೇಳಿರುವುದು ಸರಿ ಇದೆ. ಪಕ್ಷದ ಶಿಸ್ತು ಉಲ್ಲಂಘಿಸಿ ಮಾತನಾಡುವ ಎಲ್ಲರ ಮೇಲೂ ಕ್ರಮ ಆಗಬೇಕಿದೆ ಎಂದರು.

ವಿದೇಶ ಪ್ರವಾಸ : ಶಾಸಕರು ವಿದೇಶ ಪ್ರವಾಸ ಹೋಗುವುದಕ್ಕೂ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೂ ಯಾವ ಸಂಬಂಧ ಇಲ್ಲ. ಅವರನ್ನು ಯಾರು ಕರೆದುಕೊಂಡು ಹೋಗುತ್ತಿದ್ದಾರೆ? ಡಿ.ಕೆ.ಶಿವಕುಮಾರ್ ಅವರಿಗೆ ಕೆಟ್ಟ ಹೆಸರು ತರುವ ಹುನ್ನಾರವಿದೆ. ಅದು



ರಾಜಕೀಯ ಉದ್ದೇಶದಿಂದ ಆ ರೀತಿ ಹೇಳುತ್ತಿರಬಹುದು ಎಂದು ಹೇಳಿದರು. ದೆಹಲಿಗೆ ಭೇಟಿ ನೀಡುತ್ತಿರುವುದು ಯಾವುದೇ ರೀತಿಯ ರಾಜಕಾರಣಕ್ಕೆ ಅಲ್ಲ. ಹಾಲು ಉತ್ಪಾದಕರ ಮಹಾಮಂಡಳಿಗಳ ವಸ್ತುಪ್ರದರ್ಶನವಿದೆ. ಹಾಗಾಗಿ ಕೆಎಂಎಫ್‌ನ ಆಡಳಿತ ಮಂಡಳಿ ಸಹಿತ ಹೋಗುತ್ತಿದ್ದೇವೆ. ಡಿ.ಕೆ.ಶಿವಕುಮಾರ್ ಅವರು ದೆಹಲಿಗೆ ಹೋಗುವುದು ಹೊಸದಲ್ಲ. ಅವರು 40 ವರ್ಷದಿಂದಲೂ ಹೋಗುತ್ತಿದ್ದಾರೆ. ಕೆಪಿಸಿಸಿ ಅಧ್ಯಕ್ಷರಾಗಿರುವ ಅವರಿಗೆ ರಾಜಕೀಯವಲ್ಲದೆ ಬೇರೆ ಚರ್ಚೆಯೂ ಇರುತ್ತದೆ. ಉಪಮುಖ್ಯಮಂತ್ರಿ ಆಗಿರುವುದರಿಂದ ವಿವಿಧ ಇಲಾಖೆಗಳಿಗೆ ಭೇಟಿ ನೀಡುವ ಅಗತ್ಯ ಇರಬಹುದು ಎಂದು ತಿಳಿಸಿದರು.

ಕಾಂಗ್ರೆಸ್ ಎಲ್ಲರನ್ನೂ ಗೌರವಿಸುತ್ತದೆ. ಸರ್ಕಾರ ಎಲ್ಲರನ್ನೂ ಜೊತೆಗೆ ಕರೆದೊಯ್ಯಬೇಕು. ನಮದು ಸರ್ವಧರ್ಮ ಪಾಲಿಸಿ ಅಲ್ಲವೇ? ಅತಿಥಿಗಳಿಗೆ ಆ ರೀತಿ ಮಾಡಿಬಹುದೆಂದು ಬಿಜೆಪಿ ಮುಖಂಡನಿಗೂ ನಿಗಮ ಮಂಡಳಿಯಲ್ಲಿ ಅವಕಾಶ ನೀಡಲಾಗಿದೆಯೇ ಎಂಬ ಪ್ರಶ್ನೆಗೆ ಅವರು ಉತ್ತರಿಸಿದರು.


ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

6360866626


## ಚಿನ್ನದ ಪದಕ ಗೆದ್ದು ಜಿಲ್ಲೆಯ ಕೀರ್ತಿ ಹೆಚ್ಚಿಸಿದ ನಿಶಿತ, ಪರ್ವೆಜ್: ಡಾ.ಇಮ್ರಾನ್ ಸಯಿದ್

**ಬೀದರ್: ಫೆ.11:**ಫೆಬ್ರವರಿ 4ರಿಂದ 8ರ ವರೆಗೆ ರಾಷ್ಟ್ರ ರಾಜ್ಯಧಾನಿ ನವದೆಹಲಿಯ ಇಂದಿರಾ ಗಾಂಧಿ ಕ್ರೀಡಾ ಭವನದಲ್ಲಿನ ಕೆ.ಡಿ. ಜ್ಯಾದವ್ ಒಳಾಂಗಣ ಕ್ರೀಡಾಂಗಣದಲ್ಲಿ ನಡೆದ ಅಂತರಾಷ್ಟ್ರೀಯ ಕಿಕ್ ಬೊಕ್ಸಿಂಗ್ ಕ್ರೀಡೆ-2026 ಸ್ಪರ್ಧೆಯಲ್ಲಿ ಕರ್ನಾಟಕ ರಾಜ್ಯದಿಂದ ಒಟ್ಟು 16 ಕ್ರೀಡಾಪಟುಗಳು ಭಾಗವಹಿಸಿದ್ದು ಬೀದರ ಜಿಲ್ಲೆಯಿಂದ ಮೊಹ್ಮದ್ ಪರವೇಜ ಖಾನ್ ತಂದೆ ಡಾ. ಮೊಹ್ಮದ್ ಅಯಾಜ ಖಾನ್ ಹಾಗೂ ನಿಶಿತ ಸಾವಳಗಿ ತಂದೆ ದಿ.ರಾಜಶೇಖರ್ ಸಾವಳಗಿ ಇವರು ಭಾಗವಹಿಸಿ ಅಂತರಾಷ್ಟ್ರೀಯ ಮಟ್ಟದಲ್ಲಿ ಬಂಗಾರದ ಪದಕ ಹಾಗೂ ಅಂತರಾಷ್ಟ್ರೀಯ ಬೆಳ್ಳಿ ಪದಕಗಳನ್ನು ತನ್ನದಾಗಿಸಿಕೊಂಡು ಬೀದರ ಜಿಲ್ಲೆಯ ಕೀರ್ತಿ ಹೆಚ್ಚಿಸಿದ್ದಾರೆ ಎಂದು ತಂಡದ ವ್ಯವಸ್ಥಾಪಕರಾದ ಡಾ.ಇಮ್ರಾನ್




ಸಯಿದ್ ಹೇಳಿದ್ದಾರೆ. ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಕ್ರೀಡಾ ಕೋಚ್ ಆಗಿ 2ನೇಪುಟಕ್ಕೆ►

### ಚೀಕಲಪರ್ವಿ ಪೂಜ್ಯರಿಂದ ಪ್ರವಚನ ಕಾರ್ಯಕ್ರಮ ಉದ್ಘಾಟನೆ

## ಸಂಸ್ಕಾರ ಬೆಳೆಸುವುದು ದೇಶಿಯ ಕ್ರೀಡೆ ಉಳಿಸುವುದೇ ಗಾರಿಗೆ ಜಾತ್ರೆಯ ಉದ್ದೇಶ

ಧೈರ್ಯದ ದಾರಿ

**ಮಾನ್ವಿ,ಫೆ.11–** ಮಕ್ಕಳಲ್ಲಿ ಸಂಸ್ಕಾರ ಬೆಳೆಸುವುದು, ದೇಶಿಯ ಕ್ರೀಡೆ ಉಳಿಸುವುದೇ ಗಾರಿಗೆ ಜಾತ್ರೆಯ ಉದ್ದೇಶವಾಗಿದೆ ಎಂದು ಚೀಕಲಪರ್ವಿ ಪೂಜ್ಯ ಶ್ರೀ ಸದಾಶಿವ ಮಹಾಸ್ವಾಮಿಗಳು ಹೇಳಿದರು.

ಅವರು ಮಂಗಳವಾರ ಸಂಜೆ ಕಲ್ಮಠದ ಧ್ಯಾನಮಂದಿರದಲ್ಲಿ ಗಾರಿಗೆ ಜಾತ್ರಾ ಮಹೋತ್ಸವದ ಅಂಗವಾಗಿ ಆಯೋಜಿಸಿರುವ ಪ್ರಭುಲಿಂಗ ಲೀಲೆ ಪ್ರವಚನ ಕಾರ್ಯಕ್ರಮ ಉದ್ಘಾಟಿಸಿ ಆಶೀವರ್ಚನ ನೀಡಿ ಜಾತ್ರೆಗಳು ಹಬ್ಬ ಹರಿದಿನಗಳು ನಮ್ಮೆಲ್ಲರ ಬಾಳಿನಲ್ಲಿ ಉತ್ಸಾಹ, ಸಂತಸ ಹೆಚ್ಚಿಸುತ್ತವೆ ಎಂದರು.

ನೀಲಗಲ್ ಬೃಹನ್ಮಠದ ಶ್ರೀ ಅಭಿನವ ಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಿದ್ದರು. ಕಲ್ಮಠದ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಅಧ್ಯಕ್ಷತೆ ವಹಿಸಿದ್ದರು.

ಪ್ರವಚನಕಾರ ಶ್ರೀ ರುದ್ರಯ್ಯಸ್ವಾಮಿ ಮದ್ಲಾಪುರ ಅವರು ಪ್ರಭುಲಿಂಗ




ಲೀಲೆ ಪ್ರವಚನ ಹೇಳಿದರು. ನಾ.ಮ.ಜಗದೀಶ ಅವರು ಸಂಗೀತ ಸೇವೆ ಸಲ್ಲಿಸಿದರು. ಸಿದ್ದಯ್ಯಸ್ವಾಮಿ ತಬಲವಾದನಗೈದರು. ಹಿರಿಯರಾದ ಶ್ರೀ ಶಂಕ್ರಯ್ಯಸ್ವಾಮಿ ಸುವರ್ಣಗಿರಿಮಠ, ವೀರಶೈವ ಸಮಾಜದ ಅಧ್ಯಕ್ಷ ಹರಿಹರ ಪಾಟೀಲ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಮುಖ್ಯೋಪಾಧ್ಯಾಯ ದೇವಯ್ಯ ಸ್ವಾಮಿ ಪ್ರಾಚಾರ್ಯ ಎಸ್. ಎಸ್. ಪಾಟೀಲ ಸಭಾ ಸಂಚಾಲಕರಾಗಿ ಕಾರ್ಯ ನಿರ್ವಹಿಸಿದರು. ನಂತರ ಮಾನ್ವಿ ಪಟ್ಟಣದ ಎಲ್ ಎಮ್ ಜಿ ಎಸ್ ಪ್ರೌಢಶಾಲಾ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು

ಮೊದಲನೇ ಪುಟದಿಂದ

## ಕಂದಾಯ ಇಲಾಖೆಯ ಪ್ರಗತಿ ಪರಿಶೀಲನಾ

### ಕಂದಾಯ ಇಲಾಖೆಯ ಕಾರ್ಯಕ್ರಮಗಳ ಸಮರ್ಪಕ ಅನುಷ್ಠಾನಕ್ಕೆ ಶ್ರಮಿಸಿ: ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್ ಸೂಚನೆ

ಸರ್ಕಾರದಿಂದ ಇರುವ ಮಾರ್ಗಸೂಚಿ ಪಾಲನೆಯಾಗಬೇಕು ಎಂದು ಸೂಚನೆ ನೀಡಿದರು.
ಈ ವೇಳೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು, ರಾಯಚೂರು ಜಿಲ್ಲೆಯ ಕಂದಾಯ ಇಲಾಖೆಯ ವಿವಿಧ ನ್ಯಾಯಾಲಯಗಳಲ್ಲಿ ದಾಖಲಾದ ಅರೇ ನ್ಯಾಯಿಕ ಪ್ರಕರಣಗಳ ಬಗ್ಗೆ ಸಭೆಗೆ ಮಾಹಿತಿ ನೀಡಿದರು.
ಇದೇ ಸಂದರ್ಭದಲ್ಲಿ ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ಬಸವಣೆಪ್ಪ ಕಲಶೆಟ್ಟಿ, ಜಿಲ್ಲಾಧಿಕಾರಿ ಕಚೇರಿಯ ತಹಶೀಲ್ದಾರ್ ಜಗದೀಶ್, ಜಿಲ್ಲೆಯ ವಿವಿಧ ತಾಲೂಕು ತಹಶೀಲ್ದಾರರು, ಶಿರಸ್ತೇದಾರರು, ಉಪ ತಹಶೀಲ್ದಾರರು ಸೇರಿದಂತೆ ಹಾಗೂ ಕಂದಾಯ ಮತ್ತು ಭೂಮಾಪನಾ ಇಲಾಖೆಯ ಅಧಿಕಾರಿಗಳು ಇದ್ದರು.

## ಅಭಿಷೇಕ್ ಆಸ್ಪತ್ರೆಗೆ ದಾಖಲು: ಭಾರತಕ್ಕೆ ಹಿನ್ನಡೆ

ಸ್ಥಿತಿಯ ಬಗ್ಗೆ ಯಾವುದೇ ಅಧಿಕೃತ ಮಾಹಿತಿ ಬಿಡುಗಡೆಯಾಗಿಲ್ಲ.
ತಂಡದ ಆಡಳಿತ ಮಂಡಳಿ ಮತ್ತು ಅಭಿಮಾನಿಗಳು ಇಬ್ಬರೂ ಅವರ ಆರೋಗ್ಯದ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ ಮತ್ತು ಮುಂದಿನ ವೈದ್ಯಕೀಯ ವರದಿಗಾಗಿ ಕಾಯುತ್ತಿದ್ದಾರೆ. ಅಭಿಷೇಕ್ ಅವರ ಚೇತರಿಕೆ ಮತ್ತು ಡಿಸ್ಚಾರ್ಜ್ ಬಗ್ಗೆ ವೈದ್ಯರೊಂದಿಗೆ ಸಮಾಲೋಚಿಸಿದ ನಂತರವೇ ಅಂತಿಮ ನಿರ್ಧಾರ ತೆಗೆದುಕೊಳ್ಳಲಾಗುತ್ತದೆ.

ಭಾರತ ತಂಡ ಫೆಬ್ರವರಿ 12 ರಂದು ದೆಹಲಿಯಲ್ಲಿ ನಮೀಬಿಯಾ ವಿರುದ್ಧ ಲೀಗ್ ಪಂದ್ಯವನ್ನು ಆಡಲಿದೆ . ನಂತರ ಫೆಬ್ರವರಿ 15 ರಂದು ಕೊಲಂಬೊದಲ್ಲಿ ಪಾಕಿಸ್ತಾನ ವಿರುದ್ಧ ಭಾರತ ತಂಡ ಆಡಲಿದೆ. ಮುಂಬೈನಲ್ಲಿ ಯುಎಸ್‌ಎ ವಿರುದ್ಧ ಆಡಿದ್ದ ಅಭಿಷೇಕ್ ಹೊಟ್ಟೆಗೆ ಸಂಬಂಧಿಸಿದ ಕಾಯಿಲೆಯಿಂದ ಬಳಲುತ್ತಿದ್ದು, ಮಂಗಳವಾರದ ತರಬೇತಿ ಅವಧಿಗೆ ಗೈರುಹಾಜರಾಗಿದ್ದಾರೆ. ಭಾರತದ ಸಹಾಯಕ ಕೋಚ್ ರಯಾನ್ ಟೆನ್ ಡೋಸ್ಚೇಟ್ ಕೂಡ ಈ ಬಗ್ಗೆ ಮಾತನಾಡಿ. "ಅಭಿಷೇಕ್ ಇನ್ನೂ ಹೊಟ್ಟೆಯ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಅವರು ಪಂದ್ಯಕ್ಕೆ ಲಭ್ಯವಿರುತ್ತಾರೆ ಎಂದು ನಾವು ಭಾವಿಸುತ್ತೇವೆ" ಎಂದು ರಯಾನ್ ಹೇಳಿದ್ದಾರೆ.

ಈಗ ಎಲ್ಲರ ಕಣ್ಣುಗಳು ಅಭಿಷೇಕ್ ಶರ್ಮಾ ಅವರ ಫಿಟ್ನೆಸ್ ಅಪ್ಡೇಟ್ ಮತ್ತು ಅಂತಿಮ ಆಡುವ ಆಟಗಾರರ ಮೇಲೆ ನೆಟ್ಟಿದ್ದು, ಪಂದ್ಯಕ್ಕೂ ಮುನ್ನ ಅಂತಿಮ ಆಟಗಾರರ ಪಟ್ಟಿಯನ್ನು ನಿರ್ಧರಿಸಲಾಗುತ್ತದೆ. ಅಭಿಷೇಕ್ ಶರ್ಮಾ ಫಿಟ್ ಆಗಿಲ್ಲದಿದ್ದರೆ, ಅವರ ಸ್ಥಾನದಲ್ಲಿ ಸಂಜು ಸ್ಯಾಮ್ಸನ್ ಇನ್ನಿಂಗ್ಸ್ ಆರಂಭಿಸಲಿದ್ದಾರೆ

## ತಮಿಳುನಾಡಲ್ಲಿ ಡಿಎಂಕೆ ಸರ್ಕಾರ: ಸ್ಟಾಲಿನ್ ವಿಶ್ವಾಸ



**ಚೆನ್ನೈ,ಫೆ.11–** ತಮಿಳುನಾಡು ವಿಧಾನಸಭೆಗೆ ಕೆಲವೇ ತಿಂಗಳಲ್ಲಿ ಚುನಾವಣೆ ನಡೆಯಲಿರುವ ಹಿನ್ನೆಲೆಯಲ್ಲಿ ಕಾಂಗ್ರೆಸ್ ಜೊತೆ ಮೈತ್ರಿ ಮಾಡಿಕೊಂಡು ಡಿಎಂಕೆ ಸ್ವಂತ ಬಲದ ಮೇಲೆ ಸರ್ಕಾರ ರಚಿಸಲಿದೆ ಎಂದು ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.
ಮಿತ್ರಪಕ್ಷಗಳ ನಡುವೆ ಸೀಟು ಹಂಚಿಕೆ ಕುರಿತ ಬಿಕ್ಕಟ್ಟಿನ ಗುಸುಗುಸು ಕೇಳಿಬರುತ್ತಿರುವ ನಡುವೆಯೂ, 2026 ರ ಚುನಾವಣೆಯಲ್ಲಿ ಕಾಂಗ್ರೆಸ್ ಜೊತೆ ಮೈತ್ರಿ ಮಾಡಿಕೊಂಡು ಚುನಾವಣೆ ಎದುರಿಸುವುದಾಗಿ ತಿಳಿಸಿದ್ದಾರೆ.
ಖಾಸಗೀ ವಾಹಿನಿ ದುಂಡುಮೇಜಿನ ಸಭೆಯಲ್ಲಿ ಮಾತನಾಡಿದ ಮುಖ್ಯಮಂತ್ರಿ ಎ.ಕೆ ಸ್ಟಾಲಿನ್, ಸತತ ಎರಡನೇ ಅವಧಿಗೆ ಮುಖ್ಯಮಂತ್ರಿಯಾಗುವ ನಿರೀಕ್ಷೆಯಲ್ಲಿದ್ದು ಡಿಎಂಕೆ ಎದುರಿಸುತ್ತಿರುವ ಸವಾಲುಗಳು, ಮತ್ತು ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ಪಕ್ಷದೊಂದಿಗೆ ಮೈತ್ರಿ ಮಾಡಿಕೊಂಡು ಚುನಾವಣೆ ಎದುರಿಸುತ್ತೇವೆ ಮತ್ತು ಅಧಿಕಾರ ಹಿಡಿಯುತ್ತೇವೆ ಎಂದು ಹೇಳಿದ್ದಾರೆ.
ಕಾಂಗ್ರೆಸ್ ಜೊತೆಗಿನ ಬಿರುಕು ವದಂತಿಗಳನ್ನು ನಿರಾಕರಿಸಿದ ಅವರು ಡಿಎಂಕೆ ಮುಖ್ಯಸ್ಥ, ದ್ರಾವಿಡ ಪಕ್ಷ ತನ್ನ ಮಿತ್ರ ಪಕ್ಷದೊಂದಿಗೆ ಅಧಿಕಾರವನ್ನು ಹಂಚಿಕೊಳ್ಳುತ್ತದೆಯೇ ಎಂದು ಹೇಳಲು ನಿರಾಕರಿಸಿದರೂ, ರಾಹುಲ್ ಗಾಂಧಿ ಅವರೊಂದಿಗೆ "ಸಹೋದರ ಬಾಂಧವ್ಯ" ಹೊಂದಿದ್ದು ಕಾಂಗ್ರೆಸ್ ಜೊತೆ ಮೈತ್ರಿ ಮುಂದುವರಿಯಲಿದೆ ಎಂದು ಹೇಳಿದ್ದಾರೆ.
ತಮಿಳುನಾಡಿನಲ್ಲಿ "ಡಿಎಂಕೆ ತನ್ನದೇ ಆದ ಸರ್ಕಾರವ ರಚಿಸುತ್ತದೆ" ಎಂದು ಪ್ರತಿಪಾದಿಸಿದ ಅವರು ಪಕ್ಷ 2021 ಕ್ಕಿಂತ "ಇನ್ನೂ ಹೆಚ್ಚಿನ ವಿಶ್ವಾಸ ಹೊಂದಿದೆ ಎಂದು ತಿಳಿಸಿದ್ದಾರೆ.
"ತಮಿಳುನಾಡಿನಲ್ಲಿ ಡಿಎಂಕೆ–ಕಾಂಗ್ರೆಸ್ ಮೈತ್ರಿಕೂಟ ಬಲಿಷ್ಠವಾಗಿದೆ. ಚುನಾವಣೆಯಲ್ಲಿ ಒಟ್ಟಾಗಿ ಹೋರಾಡುತ್ತೇವೆ. ಸರ್ಕಾರದಲ್ಲಿ ಅಧಿಕಾರ ಹಂಚಿಕೆಯ ಪ್ರಶ್ನೆ ಈಗ ಉದ್ಭವಿಸುವುದಿಲ್ಲ" ಎಂದು ಅವರು ಹೇಳಿದ್ದಾರೆ.
2021 ರ ತಮಿಳುನಾಡು ವಿಧಾನಸಭಾ ಚುನಾವಣೆಯಲ್ಲಿ, ಡಿಎಂಕೆ 234 ಸ್ಥಾನಗಳಲ್ಲಿ 133 ಸ್ಥಾನಗಳನ್ನು ಗೆದ್ದು, ಸ್ವಂತವಾಗಿ ಸರ್ಕಾರ ರಚಿಸಲು ಅವಕಾಶ ಮಾಡಿಕೊಟ್ಟಿತು. ಮಿತ್ರಪಕ್ಷವಾಗಿ ಸ್ಪರ್ಧಿಸಿದ ಕಾಂಗ್ರೆಸ್ 25 ಸ್ಥಾನಗಳಲ್ಲಿ 18 ಸ್ಥಾನಗಳನ್ನು ಗೆದ್ದಿತು. ಆದಾಗ್ಯೂ, ಅದಕ್ಕೆ ಯಾವುದೇ ಸಚಿವ ಸ್ಥಾನ ನೀಡಿರಲಿಲ್ಲ.
ಆದರೆ, ಈ ಬಾರಿ, ಮಿತ್ರಪಕ್ಷಗಳ ನಡುವೆ ಘರ್ಷಣೆ ಉಂಟಾಗಿದ್ದು, ಕಾಂಗ್ರೆಸ್ ಕಠಿಣ ಚೌಕಾಶಿ ನಡೆಸುತ್ತಿದೆ. ರಾಜ್ಯದಲ್ಲಿ ಡಿಎಂಕೆ ತನ್ನನ್ನು ಹತ್ತಿಕ್ಕುತ್ತಿದೆ ಎಂದು ಆರೋಪಿಸಿರುವ ಕಾಂಗ್ರೆಸ್, ಹೆಚ್ಚಿನ ಸ್ಥಾನಗಳನ್ನು ಬಯಸುತ್ತದೆ ಮತ್ತು ಮೈತ್ರಿಕೂಟ ಮತ್ತೆ ಅಧಿಕಾರಕ್ಕೆ ಬಂದರೆ ಅಧಿಕಾರ ಹಂಚಿಕೆಯ ವಿಷಯವನ್ನು ಎತ್ತಲಿದೆ ಎಂದು ತಿಳಿಸಿದೆ
ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಕಳೆದ ತಿಂಗಳು ಡಿಎಂಕೆ ಸಂಸದೆ ಕನಿಮೋಳಿ ಅವರನ್ನು ಭೇಟಿಯಾಗಿ ಚರ್ಚೆ ನಡೆಸಿದ್ದರು.ಸಂಪುಟ ಹುದ್ದೆಗಳು, ಹೆಚ್ಚಿನ ಸ್ಥಾನಗಳು ಮತ್ತು ರಾಜ್ಯಸಭಾ ಸ್ಥಾನದ ಬಗ್ಗೆ ಚರ್ಚೆಗಳು ನಡೆದವು. ಸೀಟು ಹಂಚಿಕೆ ಮಾತುಕತೆ ಫೆಬ್ರವರಿ 22 ರಿಂದ ಔಪಚಾರಿಕವಾಗಿ ಪ್ರಾರಂಭವಾಗಲಿದೆ ಎಂದು ಡಿಎಂಕೆ ತಿಳಿಸಿದೆ

## ಇನ್ನುಮುಂದೆ ಸರ್ಕಾರಿ ಕಾರ್ಯಕ್ರಮಗಳಲ್ಲಿ ವಂದೇ ಮಾತರಂ ಗೀತೆ ಕಡ್ಡಾಯ

**ನವದೆಹಲಿ, ಫೆ. 11:** ಸರ್ಕಾರಿ ಕಾರ್ಯಕ್ರಮಗಳಲ್ಲಿ ರಾಷ್ಟ್ರಗೀತೆ ಹಾಡುವಂತೆ ವಂದೇ ಮಾತರಂ ಗೀತೆಯನ್ನು ಹಾಡುವುದನ್ನು ಕೇಂದ್ರ ಗೃಹ ಸಚಿವಾಲಯ ಕಡ್ಡಾಯಗೊಳಿಸಿದೆ.ಸಚಿವಾಲಯದ ಆದೇಶದಲ್ಲಿ, ರಾಷ್ಟ್ರಗೀತೆಗೂ ಮುನ್ನ ವಂದೇ ಮಾತರಂನ 6 ಚರಣಗಳನ್ನು ಹಾಡಬೇಕು ಎಂದು ಸೂಚನೆ ನೀಡಲಾಗಿದೆ. ಹಾಗೆಯೇ ಗೀತೆಯನ್ನು ನುಡಿಸಿದರೆ ಅಥವಾ ಹಾಡಿದರೆ ಎಲ್ಲರೂ ಕಡ್ಡಾಯವಾಗಿ ಎದ್ದು ನಿಲ್ಲಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.ಆರು ಚರಣಗಳನ್ನು ವಂದೇ ಮಾತರಂ ಗೀತೆಯ 3.10 ನಿಮಿಷಗಳ ಗೀತೆಯನ್ನು ನುಡಿಸಬೇಕು ಅಥವಾ ಹಾಡಬೇಕು ಎಂದು ಹೇಳಿದೆ. ಇದರಲ್ಲಿ ತ್ರಿವರ್ಣ ಧ್ವಜ ಹಾರಿಸುವಾಗ, ಸರ್ಕಾರಿ ಕಾರ್ಯಕ್ರಮಗಳಿಗೆ ರಾಷ್ಟ್ರಪತಿಗಳ ಆಗಮನದ ಸಮಯದಲ್ಲಿ, ಅವರ ಭಾಷಣಗಳು ಮತ್ತು ರಾಷ್ಟ್ರವನ್ನುದ್ದೇಶಿಸಿ ಭಾಷಣ ಮಾಡುವ ಮೊದಲು ಮತ್ತು ನಂತರ, ಹಾಗೆಯೇ ರಾಜ್ಯಪಾಲರ ಆಗಮನ ಮತ್ತು ಭಾಷಣಗಳ ಮೊದಲು ಮತ್ತು ನಂತರವೂ ಸೇರಿದೆ.

ಯಾವುದೇ ಸಾಕ್ಷ್ಯಚಿತ್ರಗಳ ಪ್ರದರ್ಶನಗಳ ಮಧ್ಯೆ ಗೀತೆ ಹಾಡಿದರೆ ಎದ್ದುನಿಲ್ಲುವ ಅಗತ್ಯವಿಲ್ಲ.6 ಚರಣಗಳಿರುವ ವಂದೇ ಮಾತರಂ ಗೀತೆಯನ್ನು ಹಾಡುವುದು ಕಡ್ಡಾಯ ಈ ನಿರ್ದೇಶನವನ್ನು ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು, ಸಚಿವಾಲಯಗಳು ಮತ್ತು ಸಾಂವಿಧಾನಿಕ ಸಂಸ್ಥೆಗಳಿಗೆ ಇಂಗ್ಲಿಷ್ ಮತ್ತು ಹಿಂದಿಯಲ್ಲಿ ನೀಡಲಾಗಿದೆ.
ಇಲ್ಲಿಯವರೆಗೆ, ವಂದೇ ಮಾತರಂ ಹಾಡಲು ಯಾವುದೇ ಅಧಿಕೃತ ಶಿಷ್ಟಾಚಾರವಿರಲಿಲ್ಲ. ಆದರೆ ಜನ ಗಣ ಮನ ಗೀತೆಯು ರಾಗ, ಸಮಯ ಮತ್ತು ಗಾಯನದ ಬಗ್ಗೆ ಸ್ಪಷ್ಟ ನಿಯಮಗಳನ್ನು ಹೊಂದಿತ್ತು. ಹಾಡಿನ ವಿಸ್ತೃತ, ಆರು–ಚರಣಗಳ ಆವೃತ್ತಿಯನ್ನು ಇಲ್ಲಿಯವರೆಗೆ ಅಧಿಕೃತ ಕಾರ್ಯಕ್ರಮಗಳಲ್ಲಿ ಹಾಡಿರಲಿಲ್ಲ, ಆದರೆ ಈಗ ಅದನ್ನು ಕಡ್ಡಾಯಗೊಳಿಸಲಾಗಿದೆ.

ಶಾಲೆಗಳಲ್ಲಿಯೂ ವಂದೇ ಮಾತರಂ ಹಾಡಲು ಸಲಹೆ; ಎಲ್ಲಾ ಶಾಲೆಗಳು ತಮ್ಮ ದಿನವನ್ನು ಸಾಮೂಹಿಕವಾಗಿ ರಾಷ್ಟ್ರಗೀತೆ ಹಾಡುವುದರೊಂದಿಗೆ ಪ್ರಾರಂಭಿಸಲಾಗುತ್ತದೆ ಇನ್ನು ಮುಂದೆ ಅದರ ಜತೆ ವಂದೇ ಮಾತರಂ ಕೂಡ ಹಾಡಬಹುದು. ಈ ವರ್ಷ ರಾಷ್ಟ್ರೀಯ ಗೀತೆ ವಂದೇ ಮಾತರಂ ನ 150 ನೇ ವಾರ್ಷಿಕೋತ್ಸವವನ್ನು ಆಚರಿಸಲಾಗುತ್ತಿದೆ.ಬಂಕಿಮ್ ಚಂದ್ರ 1875 ರಲ್ಲಿ ದೇಶಭಕ್ತಿ ಗೀತೆ ವಂದೇ ಮಾತರಂ ರಚನೆ ಈ ಸಂಯೋಜನೆಯ ಹಿಂದೆ ಒಂದು ಕುತೂಹಲಕಾರಿ ಕಥೆ ಇದೆ. ಬ್ರಿಟಿಷ್ ಆಡಳಿತಗಾರರು ಪ್ರತಿ ಸಮಾರಂಭದಲ್ಲಿ ಇಂಗ್ಲೆಂಡ್ ರಾಣಿಗೆ ಗೌರವ ಸಲ್ಲಿಸುವ ಸೇವ್ ದಿ ಕ್ವೀನ್ ಎಂಬ ಹಾಡನ್ನು ಹಾಡುವುದನ್ನು ಕಡ್ಡಾಯಗೊಳಿಸಿದ್ದರು.ಇದು ಬಂಕಿಮ್ ಚಂದ್ರ ಸೇರಿದಂತೆ ಅನೇಕ ದೇಶವಾಸಿಗಳನ್ನು ಕೆರಳಿಸಿತು. ಇದಕ್ಕೆ ಪ್ರತಿಕ್ರಿಯೆಯಾಗಿ, ಅವರು 1874 ರಲ್ಲಿ ವಂದೇ ಮಾತರಂ ಎಂಬ ಹಾಡನ್ನು ರಚಿಸಿದರು.ಈ ಹಾಡಿನ ಕೇಂದ್ರ ವಿಷಯವೆಂದರೆ ಭಾರತದ ಭೂಮಿಯನ್ನು ತಾಯಿ ಎಂದು ಸಂಬೋಧಿಸುವುದು.ಈ ಹಾಡನ್ನು ನಂತರ ಅವರ 1882 ರ ಕಾದಂಬರಿ ಆನಂದಮಠದಲ್ಲಿ ಸೇರಿಸಲಾಯಿತು. ಐತಿಹಾಸಿಕ ಮತ್ತು ಸಾಮಾಜಿಕ ರಚನೆಗಳಿಂದ ಹೆಣೆಯಲಾದ ಈ ಕಾದಂಬರಿಯು ದೇಶದಲ್ಲಿ ರಾಷ್ಟ್ರೀಯತೆಯ ಚೈತನ್ಯವನ್ನು ಜಾಗೃತಗೊಳಿಸಲು ಗಮನಾರ್ಹವಾಗಿ ಕೊಡುಗೆ ನೀಡಿತು.

ವಂದೇ ಮಾತರಂ ಅನ್ನು ಮೊದಲ ಬಾರಿಗೆ ಹಾಡಿದ್ದು 1896 ರಲ್ಲಿ, ಕೋಲ್ಕತ್ತಾದಲ್ಲಿ ನಡೆದ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಅಧಿವೇಶನದಲ್ಲಿ ಮೊದಲ ಬಾರಿಗೆ ಈ ಹಾಡನ್ನು ಹಾಡಲಾಯಿತು. ಅಲ್ಪಾವಧಿಯಲ್ಲಿಯೇ, ದೇಶಭಕ್ತಿಯ ಸಂಕೇತವಾದ ಈ ಹಾಡು ಬ್ರಿಟಿಷ್ ಆಳ್ವಿಕೆಯ ವಿರುದ್ಧ ಭಾರತೀಯ ಕ್ರಾಂತಿಕಾರಿಗಳ ನೆಚ್ಚಿನ ಹಾಡು ಮತ್ತು ಮುಖ್ಯ ಘೋಷಣೆಯಾಯಿತು. ದೇಶಾದ್ಯಂತ, ಕ್ರಾಂತಿಕಾರಿ ಮಕ್ಕಳು, ಯುವಕರು, ವಯಸ್ಕರು ಮಾತ್ರವಲ್ಲದೆ, ಭಾರತೀಯ ಮಹಿಳೆಯರು ಸಹ ಸ್ವಾತಂತ್ರ್ಯ ಹೋರಾಟದ ಅದೇ ಘೋಷಣೆಯನ್ನು ಪ್ರತಿಧ್ವನಿಸಿದರು.

## ಮಾತ್ರೆ ಒಂದು, ಪ್ರಯೋಜನ ಹಲವು: ಜಂತುಹುಳು ನಿವಾರಣೆಯೇ ಸೌಖ್ಯದ ಹಾದಿ

ಧೈರ್ಯದ ದಾರಿ



**ಸಿರವಾರ ಫೆ11:** ಜಂತುಹುಳು ನಿವಾರಿಸುವ ಮಾತ್ರೆಗಳಿಂದ ಅಪೌಷ್ಠಿಕತೆ ಮತ್ತು ರಕ್ತಹೀನತೆ ತಡೆಯಬಹುದು. ಮಕ್ಕಳ ದೈಹಿಕ ಹಾಗೂ ಮಾನಸಿಕ ಬೆಳವಣಿಗೆಗೆ ಸಹಕಾರಿಯಾಗುವ ಮಾತ್ರೆಗಳನ್ನು ತಪ್ಪದೆ 1 ವರ್ಷದಿಂದ 19 ವರ್ಷದೊಳಗಿನ ಮಕ್ಕಳು ಸೇವಿಸಬೇಕು ಎಂದು ಜಿಲ್ಲಾ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಭೀಮೇಶಪ್ಪ ದೊಡ್ಮನಿ ಅವರು ತಿಳಿಸಿದರು.

ಪಟ್ಟಣ ಶ್ರೀಮತಿ ಇಂದಿರಾ ಗಾಂಧಿ ಕಲ್ಲೂರು (ಸಿರವಾರ) ವಸತಿ ಶಾಲೆಯಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಜಂತು ಹುಳು ನಿವಾರಣಾ ದಿನ ಮತ್ತು ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ನಂತರ ಡಾ ಸುನೀಲ್ ಸರೋದೆ ವೈದ್ಯಾಧಿಕಾರಿ ಮಾತನಾಡಿ, ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನ ಜ. 30 (ಗಾಂಧಿ ಪುಣ್ಯತಿಥಿ) ದಿಂದ ಪ್ರಾರಂಭವಾಗಿ 13, 2026 ರವರೆಗೆ 15 ದಿನಗಳ ಕಾಲ ನಡೆಯುತ್ತದೆ, ಕುಷ್ಠರೋಗದ ಬಗ್ಗೆ ಜನರಲ್ಲಿರುವ ತಪ್ಪು ಕಲ್ಪನೆಗಳನ್ನು ಹೋಗಲಾಡಿಸಲು, ರೋಗದ ಮುಂಚಿನ ಪತ್ತೆ ಮತ್ತು ಉಚಿತ ಚಿಕಿತ್ಸೆಯ ಬಗ್ಗೆ ಅರಿವು ಮೂಡಿಸಲು ಆರೋಗ್ಯ ಇಲಾಖೆ ಮತ್ತು ನಿರಂತರ ಪ್ರಯತ್ನಗಳನ್ನು ನಡೆಸುತ್ತಿವೆ ಎಂದರು.
ನಂತರ ಮಕ್ಕಳಿಗೆ ಸ್ಪರ್ಶ ಕುಷ್ಠ ರೋಗ ಕುರಿತು ಪ್ರಬಂಧ ಸ್ಪರ್ಧೆ ಏರ್ಪಡಿಸಿ ಪ್ರಥಮ, ದ್ವಿತೀಯ, ತೃತೀಯ ಸ್ಥಾನದಲ್ಲಿ ಅಂಕ ಪಡೆದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ಹೆಚ್ಚಿನ ಮಾಹಿತಿಗಾಗಿ ಅಥವಾ ನಿಮ್ಮ ಮಗುವಿಗೆ ತಪಾಸಣೆ ಚಿಕಿತ್ಸೆ ಮಾತ್ರೆ ನೀಡುವ ಬಗ್ಗೆ ತಿಳಿಯಲು ಹತ್ತಿರದ ಸರ್ಕಾರಿ ಆರೋಗ್ಯ ಕೇಂದ್ರ ಅಥವಾ ಅಂಗನವಾಡಿಯನ್ನು ಸಂಪರ್ಕಿಸಬಹುದು. ವೈದ್ಯಕೀಯ ಸಲಹೆ ಅಥವಾ ಡಯಾಗ್ನೋಸಿಸ್‌ಗಾಗಿ ವೃತ್ತಿಪರರನ್ನು ಸಂಪರ್ಕಿಸಿ.

ಮುಖ್ಯೋಪಾಧ್ಯಾಯ ರಾಮಪ್ಪ, ಬಿಹೆಚ್ಓ ಶ್ರೀ ದೇವಿ, ಆರೋಗ್ಯ ನಿರೀಕ್ಷಣಾಧಿಕಾರಿ ಯಲ್ಲಾಲಿಂಗ, ಅಕ್ಕಮಹಾದೇವಿ, ಸುಮಾ ಸೇರಿದಂತೆ ಆರೋಗ್ಯ ಸಿಬ್ಬಂದಿ ವರ್ಗ, ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಇಂದು ಜಿಲ್ಲಾ ಮಟ್ಟದ ರೈತ ಸಮಾವೇಶ: ಕಲ್ಮಠಶ್ರೀ

ಧೈರ್ಯದ ದಾರಿ



**ಮಾನ್ವಿ,ಫೆ.11–** ಪಟ್ಟಣದ ಧ್ಯಾನ ಮಂದಿರದ ಆವರಣದಲ್ಲಿ ಕಲ್ಮಠ ಗಾರಿಗೆ ಜಾತ್ರೆ ಅಂಗವಾಗಿ ಫೆ.12 ರಂದು ಬೆಳಿಗ್ಗೆ 10.30ಕ್ಕೆ ಕೃಷಿ ಇಲಾಖೆ, ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಕರ್ನಾಟಕ ರಾಜ್ಯ ರೈತ ಸಂಘ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ತಾಲೂಕು ಘಟಕ ಮಾಧ್ಯಮ ಸಮಿತಿ ವತಿಯಿಂದ ಹಮ್ಮಿಕೊಂಡ ಜಿಲ್ಲಾ ಮಟ್ಟದ ರೈತ ಸಮಾವೇಶವನ್ನು ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶಕರಾದ ಡಾ.ಎ.ಆರ್ ಕುರುಬರ ಉದ್ಘಾಟಿಸಲಿದ್ದಾರೆ,ಕೃಷಿ ವಸ್ತು ಪ್ರದರ್ಶನ ಮಳಿಗೆಗಳನ್ನು ಜಿಲ್ಲಾ ಕೃಷಿ ಜಂಟಿ ನಿರ್ದೇಶಕರಾದ ಪ್ರಕಾಶ ಆರ್ ಚೌಹಾಣ್ ಉದ್ಘಾಟಿಸಲಿದ್ದಾರೆ.

ದಿವ್ಯಸಾನಿಧ್ಯವನ್ನು ಚೀಕಲಪರ್ವಿ ಶ್ರೀ ರುದ್ರಮುನೀಶ್ವರ ಮಠದ ಶ್ರೀ ಸದಾಶಿವಮಹಾಸ್ವಾಮಿಗಳು, ಕಲ್ಮಠದ ಶ್ರೀ ವಿರೂಪಾಕ್ಷ ಪಂಡಿತರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸಲಿದ್ದಾರೆ. ಉಚಿತ ಆರೋಗ್ಯ ಶಿಬಿರವನ್ನು ತಹಶೀಲ್ದಾರ್ ಭೀಮರಾಯ ಬಿ.ರಾಮಸಮುದ್ರ ಉದ್ಘಾಟಿಸಲಿದ್ದಾರೆ. ಅಧ್ಯಕ್ಷತೆಯನ್ನು ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಗೌರವಾಧ್ಯಕ್ಷರಾದ ಚಾಮರಸ ಮಾಲಿ ಪಾಟೀಲ್ ಬೆಟ್ಟದೂರು ವಹಿಸಿಕೊಳ್ಳಲಿದ್ದಾರೆ. ಮುಖ್ಯ ಅತಿಥಿಗಳಾಗಿ ಟಿ.ಎ.ಪಿ.ಸಿ.ಎಂ.ಸಿ. ಅಧ್ಯಕ್ಷರಾದ ತಿಮ್ಮರೆಡ್ಡಿ ಭೋಗವಾತಿ,ತಾ.ಸಹಾಯಕ ಕೃಷಿ ನಿರ್ದೇಶಕರಾದ ಗುರುನಾಥ ಭೂಸನೂರ,ಅ.ಭಾ.ವೀ.ಲಿಂ.ಮಹಾಸಭಾ ಜಿಲ್ಲಾಧ್ಯಕ್ಷರಾದ ಚಂದ್ರಶೇಖರ ಮಿರ್ಜಾಪುರ್,ತಾ,ಅಧ್ಯಕ್ಷರಾದ ಅರುಣಚಂದಾ,ರಾಜ್ಯ ಕಾರ್ಯಕಾರಣಿ ಸದಸ್ಯರಾದ ಸಿದ್ದಲಿಂಗಪ್ಪ ವಕೀಲರು, ತಾ.ವೀರಶೈವಲಿಂಗಾಯತ ಸಮಾಜದ ಅಧ್ಯಕ್ಷರಾದ ಹರಿಹರ ಪಾಟೀಲ್,ಗೌ.ಅಧ್ಯಕ್ಷರಾದ ಶ್ರೀಧರಸ್ವಾಮಿ, ಸೇರಿದಂತೆ ಗಣ್ಯರು ಭಾಗವಹಿಸಲಿದ್ದಾರೆ. ಕೃ.ವಿ.ವಿ.ರಾಯಚೂರು ಕೃಷಿ ವಿಜ್ಞಾನಿಗಳಾದ ಡಾ.ಪ್ರಭುರಾಜ್.ಎ, ಡಾ.ಎಂ.ಎ. ಬಸವಣ್ಣೆಪ್ಪ, ಡಾ.ತಿಮ್ಮಣ್ಣ, ಮಂಡ್ಯದ ಸಾವಯವ ರೈತ ಕೃಷ್ಣಪ್ಪ ಬೆನ್ನೂರು, ಹಿರಿಯ ಅಂಕಣಕಾರರಾದ ಅಮರೇಗೌಡ ಗೋನಾವರ , ಡಾಬಸವಪ್ರಸಾದ್ .ಬಿ. ಪಕ್ಷಿ ಪ್ರೇಮಿ ಸಲ್ಲಾವುದಿನ್, ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪನ್ಯಾಸ ನೀಡಲಿದ್ದಾರೆ. ಗೋಷ್ಠಿಗಳ ಸಂಚಲನೆಯನ್ನು ಹಿರಿಯ ವರದಿಗಾರರಾದ ಬಸವರಾಜ ಭೋಗವತಿ ನಿರ್ವಹಿಸಲಿದ್ದಾರೆ. ಕೃಷಿ ಕ್ಷೇತ್ರದಲ್ಲಿನ ಸಾಧಕರನ್ನು ಸನ್ಮಾನಿಸಿ ಗೌರವಿಸಲಾಗುವುದು ಎಂದು ಕಲ್ಮಠದ ಶ್ರೀ ವಿರೂಪಾಕ್ಷ ಪಂಡಿತರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಪ್ರಕಟಣೆಯಲ್ಲಿ ಕೋರಿದ್ದಾರೆ..

## ಉಚಿತ ಆರೋಗ್ಯ ತಪಾಸಣಾ ಶಿಬಿರದಿಂದ ಜನಸಾಮಾನ್ಯರಿಗೆ ಹೆಚ್ಚು ಅನುಕೂಲ: ಶಾಸಕ ಮತ್ತಿಮೂಡ



**ಕಲಬುರಗಿ,ಫೆ.11–**ಉಚಿತ ಆರೋಗ್ಯ ತಪಾಸಣಾ ಶಿಬಿರದಿಂದ ಜನಸಾಮಾನ್ಯರ ದೀನ ದಲಿತರ ಬಡವರ ಗಂಭೀರ ಕಾಯಿಲೆಗಳು ತಿಳಿದುಕೊಳ್ಳಲು ಇಂತಹ ಶಿಬಿರದಿಂದ ಸಾಧ್ಯವಾಗುತ್ತದೆ. ಅಲ್ಲದೆ ಇಂದಿನ ವೈದಿಕೀಯ ಕ್ಷೇತ್ರ ವ್ಯಾಪಾರಿಕರಣವಾಗಿದ್ದು ಬಡವರ ಕಾಯಿಲೆಗಳು ಯಾವು ಎನ್ನುವುದು ತಿಳಿದುಕೊಂಡು ಸೂಕ್ತ ಚಿಕಿತ್ಸೆ ಪಡೆದುಕೊಳ್ಳಲು ಸಹಾಯವಾಗುತ್ತದೆ ಎಂದು ಗ್ರಾಮೀಣ ಮತ ಕ್ಷೇತ್ರದ ಶಾಸಕರಾದ ಬಸವರಾಜ ಮತ್ತಿಮೂಡು ಹೇಳಿದರು.

ಸಂಕಲ್ಪ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಹಾಗೂ ಜವಾಹರ್ ಲಾಲ್ ಗೃಹ ನಿರ್ಮಾಣ ಸಹಕಾರ ಸಂಘ ಬಂಜಾರ ಕ್ಷೇಮಾಭಿವೃದ್ಧಿ ಸಂಘ ಕಲಬುರಗಿ ಇವರುಗಳ ಸಂಯುಕ್ತ ಆಶ್ರಯದಲ್ಲಿ ಬಂಜಾರಾ ಕಾಲೋನಿಯಲ್ಲಿ ಹಮ್ಮಿಕೊಂಡ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಗ್ರಾಮೀಣ ಮತ ಕ್ಷೇತ್ರದ ಶಾಸಕರಾದ ಬಸವರಾಜ ಮತ್ತಿಮೂಡು ಮಾತನಾಡಿದರು.

ಈ ದಿಶೆಯಲ್ಲಿ ಡಾ. ಪ್ರಶಾಂತ ಚವ್ಹಾಣ ಉತ್ಸಾಹಿಯಾಗಿದ್ದು ಸಮಾಜಕ್ಕಾಗಿ ಏನಾದರೂ ಸೇವೆ ಮಾಡಬೇಕೆಂಬ ಇಚ್ಚೆ ಇದೆ ಸಂಕಲ್ಪ ಆಸ್ಪತ್ರೆ ಕೈಗೊಳ್ಳುವ ವೈದ್ಯಕೀಯ ಸೇವೆಗೆ ನನ್ನ ಸಂಪೂರ್ಣ ಸಹಾಯವಿರುತ್ತದೆ. ಬಂಜಾರಾ ಸಮುದಾಯದಲ್ಲಿ ಶಿಕ್ಷಣದ ಬಗ್ಗೆ ಹೆಚ್ಚು ಅರಿವು ಇದ್ದು ಸಂಕಲ್ಪ ಆಸ್ಪತ್ರೆ ಕೈಗೊಂಡಿರುವ ಜನಸಾಮಾನ್ಯರಿಗೆ ಉಚಿತ ಆರೋಗ್ಯದ ಸೇವೆ ಸಮಾಜಕ್ಕೆ ಮಾದರಿ ಆಗಿದೆ . ಬಂಜಾರ ಕಾಲೋನಿಯಲ್ಲಿ ಸಿಸಿ ರಸ್ತೆ ಸೇವಾಲಾಲ್ ದೇವಸ್ಥಾನಕ್ಕೆ ನಿರ್ಮಾಣಕ್ಕೆ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಹೇಳಿದರು.

ವೈದ್ಯ ದಂಪತಿಗಳಾದ ಮಕ್ಕಳ ತಜ್ಞ ಡಾ.ಪ್ರಶಾಂತ ಚವ್ಹಾಣ , ಪ್ರಸೂತಿ ಹಾಗೂ ಸ್ತ್ರೀ ರೋಗ ತಜ್ಞೆ ಅಶ್ವಿನಿ ಪ್ರಶಾಂತ್ ಚವ್ಹಾಣ,ಡಾ.ಬಬಿತಾ ಪವಾರ ವೈದ್ಯರು ಶಿಬಿರದಲ್ಲಿ ಪಾಲ್ಗೊಂಡರು. 150 ಕ್ಕಿಂತ ಹೆಚ್ಚು ಮಕ್ಕಳು ,ವಯಸ್ಕರು, ಮಹಿಳೆಯರು, ವೃದ್ಧರು ಶಿಬಿರದ ಲಾಭ ಪಡೆದರು. ಇದೇ ಸಂದರ್ಭದಲ್ಲಿ ರೋಗಿಗಳಿಗೆ ಸಂಕಲ್ಪ ಆಸ್ಪತ್ರೆಯಿಂದ ಉಚಿತ ಔಷಧಿಗಳನ್ನು ವಿತರಿಸಲಾಯಿತು. ಕುಸನೂರು ಗ್ರಾಮ ಪಂಚಾಯತಿ ಅಧ್ಯಕ್ಷ ಕುಪೇಂದ್ರ ಬರಗಾಲಿ , ಬಂಜಾರ ನೌಕರ ಸಂಘದ ಜಿಲ್ಲಾಧ್ಯಕ್ಷ ಹರಿಶ್ಚಂದ್ರ ರಾಠೋಡ್ , ಗೇಮಸಿಂಗ ಚವ್ಹಾಣ,ಅಮೃತ ಪವಾರ,ಸುನೀಲ್ ಕುಮಾರ್ ಚವ್ಹಾಣ,ಬಿ .ಬಿ ನಾಯಕ, ವಸಂತರಾವ ಚವ್ಹಾಣ, ಸಂಜೀವಕುಮಾರ ಚವ್ಹಾಣ, ಮಾಣಿಕ, ನರಸಪ್ಪ ರಂಗೋಲಿ ,ತಾರಾನಾಥ ಚವ್ಹಾಣ, ಮಾಣಿಕ ಜಾಧವ,ಎಸ್ ಎಮ್ ರಾಠೋಡ್, ಸುಭಾಷ್ ರಾಠೋಡ್, ಬನಸಿ, ಸುಧಾಕರ್ ರಾಠೋಡ ,ಲಿಂಬಾಜಿ ಚವ್ಹಾಣ,ಪ್ರೇಮಸಿಂಗ ಚವ್ಹಾಣ ಬಾಬು ರಾಠೋಡ್, ಪ್ರಭು ಜಾಧವ, ವಸಂತ್ ರಾಠೋಡ್, ಚಂದ್ರಕಾಂತ ರಾಠೋಡ ಮುಂತಾದವರು ಉಪಸ್ಥಿತರಿದ್ದರು.

ಉಪನ್ಯಾಸಕ ಪಾಂಡು ಎಲ್ ರಾಠೋಡ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ. ಕುಪೇಂದ್ರ ರಾಠೋಡ್ ಸ್ವಾಗತಿಸಿದರು.ಡಾ. ಕೃಷ್ಣಾ ನಾಯಕ್ ನಿರೂಪಿಸಿದರು. ಶಿಕ್ಷಕ ರಾಜ್‌ಕುಮಾರ್ ರಾಠೋಡ್ ವಂದಿಸಿದರು.

# ಶುಲ್ಕ ಮರುಪಾವತಿಗೆ ಅರ್ಜಿ ಸಲ್ಲಿಸಲು ಫೆ.15 ಕೊನೆಯ ದಿನ

**ರಾಯಚೂರು ಫೆ,11–** ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1ರ ಅಲೆಮಾರಿ, ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ 2025–26ನೇ ಸಾಲಿಗೆ ಶುಲ್ಕ ಮರುಪಾವತಿ ಕಾರ್ಯಕ್ರಮದ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿಯ ಅವಧಿಯನ್ನು ಫೆ.15ರವರೆಗೆ ವಿಸ್ತರಿಸಲಾಗಿದೆ. ಪೋಷಕರು, ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕ ಸಂಸ್ಥೆಗಳ ಮನವಿಯ ಮೇರೆಗೆ ಅರ್ಜಿಯ ಅವಧಿಯನ್ನು ವಿಸ್ತರಿಸಲಾಗಿದೆ. ಅರ್ಹ ವಿದ್ಯಾರ್ಥಿಗಳು ಈ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳವಂತೆ ಕೋರಲಾಗಿದೆ.

ಬಿ.ಆರ್ಕ್, ಎಂ.ಸಿ.ಎ, ಎಂ.ಸಿ.ಎಚ್ (ವೈದ್ಯಕೀಯ), ಎಂ.ಡಿ, ಎಂ.ಎಸ್ (ಮಾಸ್ಟರ್ ಆಫ್ ಸರ್ಜರಿ), ಎಂ.ಎಸ್, ಎಂ.ಎಸ್ಸಿ (ಅಲೈಡ್ ಸೈನ್ಸಸ್), ಎಂಪಿಟಿ (ಫಿಸಿಯೋಥೆರಪಿ), ಎಂಎಚ್‌ಎ, ಮಾಸ್ಟರ್ ಆಫ್ ಪಬ್ಲಿಕ್ ಹೆಲ್ತ್, ಎಂಪಿಎಚ್ (ಅಲೈಡ್ ಸೈನ್ಸಸ್), ಎಂ.ಎಸ್ಸಿ. ನರ್ಸಿಂಗ್, ಎಂ.ಎಸ್ಸಿ, ಎಂ.ಟೆಕ್, ಎಂಬಿಎ, ಎಂಬಿಎ ಫಿನ್‌ಟೆಕ್, ಎಂಬಿಎ (ಲಾಜಿಸ್ಟಿಕ್ಸ್ ಮ್ಯಾನೇಜ್‌ಮೆಂಟ್), ಎಂಬಿಬಿಎಸ್, ಎಂಎಸ್ ಆಯುರ್ವೇದ, ಎಂಡಿ (ಆಯುರ್ವೇದ), ಎಂಡಿ (ಹೋಮ್), ಎಂಡಿಎಸ್, ಪಿಜಿ ಡಿಪ್ಲೊಮಾ ಇನ್ ಡೆಂಟಲ್, ಫಾರ್ಮ್.ಡಿ (ಪೋಸ್ಟ್ ಬ್ಯಾಕಲೌರಿಯೇಟ್), ಎಂ.ಫಾರ್ಮ್, ಬಿ.ಇ, ಬಿ.ಟೆಕ್, ಬಿ.ಎಸ್ಸಿ (ಆನರ್ಸ್), ಬಿ.ವಿ.ಎಸ್ಸಿ.&ಎ.ಎಚ್, ಬಿಎಎಂಎಸ್ (ಆಯುರ್ವೇದ), ಬಿಎಚ್‌ಎಂಎಸ್ (ಹೋಮಿಯೋಪತಿ), ಬಿಎನ್‌ವೈಎಸ್ (ಯೋಗ ಮತ್ತು ಪ್ರಕೃತಿ ಚಿಕಿತ್ಸೆ), ಬಿಯುಎಂಎಸ್ (ಯುನಾನಿ), ಬಿಎಎಂಎಸ್, ಬಿಡಿಎಸ್, ಎಂ.ಆರ್ಕ್, ಬಿ.ಎಫ್.ಎಸ್ಸಿ, ಬಿ.ಫಾರ್ಮ್, ಫಾರ್ಮ್. ಡಿ, ಬಿ.ಎಸ್ಸಿ (ಅಲೈಡ್ ಸೈನ್ಸಸ್), ಬಿಪಿಟಿ (ಫಿಸಿಯೋಥೆರಪಿ), ಬ್ಯಾಚುಲರ್ ಆಫ್ ಆಕ್ಯುಪೇಷನಲ್ ಥೆರಪಿ, ಬಿ.ಡೆಸ್, ಬಿ.ಎಸ್ಸಿ. (ನರ್ಸಿಂಗ್), ಬಿ.ಎಸ್ಸಿ. (ಪೋಸ್ಟ್ ಬೇಸಿಕ್), ಬಿ.ಎಡ್, ಬಿ.ಪ್ಲಾನ್, ಡಿಎಂ (ವೈದ್ಯಕೀಯ), ಎಂ.ಫಿಲ್, ಬಿ ಟೆಕ್ ಕಂಪ್ಯೂಟರ್ ಸೈನ್ಸ್ ಮತ್ತು ಎಂಜಿನಿಯರಿಂಗ್ (ಪೂರ್ಣ ಸ್ಟ್ಯಾಕ್ ಡೆವಲಪ್ಮೆಂಟ್), ಬಿ ಟೆಕ್ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಎಂಜಿನಿಯರಿಂಗ್ (ಎಲೆಕ್ಟ್ರಿಕ್ ವೆಹಿಕಲ್ ಟೆಕ್ನಾಲಜಿ), ಪ್ಯಾರಾಮೆಡಿಕಲ್ ಮತ್ತು ಎಲ್ಲಾ ಡಿಪ್ಲೊಮಾ ಕೋರ್ಸ್‌ಗಳ ವಿದ್ಯಾರ್ಥಿಗಳು ಫೆ.15ರೊಳಗಾಗಿ ವೆಬ್‌ಸೈಟ್ ವಿಳಾಸ: ïಣಣಠಿ://ಠಿ.ಠಿಥಣಟಚಿಣಡುಥಿ.ಇಚಿಡಿಟಿಚಿಣಚಿಞಚಿ.ರಠತ.ಟಿ ನಲ್ಲಿ ಸಲ್ಲಿಸಬಹುದಾಗಿದೆ.

ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ವೆಬ್‌ಸೈಟ್ ವಿಳಾಸ: https://bcwd.karnataka.gov.in ಮಾಹಿತಿಗಾಗಿ ಭೇಟಿ ನೀಡಬಹುದಾಗಿದೆ. ಇಲಾಖಾ ಸಹಾಯವಾಣಿ ದೂರವಾಣಿ ಸಂಖ್ಯೆ: 8050770004 ಅಥವಾ ಮೇಲ್: bcwdhelpline@gmail.com, ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇಮೇಲ್: postmatrichelp@karnataka.gov.in ಅಥವಾ ಸಹಾಯಣಿ ಸಂಖ್ಯೆ: 1902ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೇವದಾಸಿ ಪುನರ್ವಸತಿ ಯೋಜನೆ ಕಚೇರಿಯಲ್ಲಿ ವಿವಿಧ ಹುದ್ದೆಗಳ ಭರ್ತಿಗೆ ಅರ್ಜಿ ಆಹ್ವಾನ

**ರಾಯಚೂರು ಫೆ,11–** ಇಲ್ಲಿನ ದೇವದಾಸಿ ಪುನರ್ವಸತಿ ಯೋಜನೆ ಕಚೇರಿಯಲ್ಲಿ 2025–26ನೇ ಸಾಲಿನಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಯೋಜನಾಧಿಕಾರಿಗಳು 1 ಹುದ್ದೆಗೆ ಎಂಎಸ್‌ಡಬ್ಲ್ಯೂ, ಎಂಎ ಇನ್ ಸಮಾಜಶಾಸ್ತ್ರ, ಎಂಎ.ಎಂಎಸ್‌ಸಿ ಇನ್ ಮನಶ್ಯಾಸ್ತ್ರ ಪದವಿ ಜೊತೆಗೆ ಕಂಪ್ಯೂಟರ್ ಜ್ಞಾನ ಕಡ್ಡಾಯ ಹೊಂದಿರಬೇಕು. ನಿವೃತ್ತ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ 65 ವರ್ಷ ವಯಸ್ಸು ಇರುವವರಿಗೆ ಅದ್ಯತೆ ನೀಡಲಾಗುವುದು.

ಮಾನವಿ ಹಾಗೂ ಲಿಂಗಸುಗೂರಿನಲ್ಲಿ ಯೋಜನಾ ಅನುಷ್ಠಾನಾಧಿಕಾರಿಗಳು 2 ಹುದ್ದೆಗೆ ಬಿಎಸ್‌ಡಬ್ಲ್ಯೂ/ಬಿಎ/ ಮನೋವಿಜ್ಞಾನ, ಎಂಎ/ಎಂಎಸ್‌ಸಿ ಇನ್ ಸಮಾಜಶಾಸ್ತ್ರ ಪದವಿ ಜೊತೆಗ ಕಂಪ್ಯೂಟರ್ ಜ್ಞಾನ ಕಡ್ಡಾಯ ಹೊಂದಿರಬೇಕು. ಸರ್ಕಾರದ ಅಧಿನ ಸಂಸ್ಥೆಗಳಲ್ಲಿ ಕನಿಷ್ಠ 3–4 ವರ್ಷಗಳ ಹೊಂದಿರುವವರಿಗೆ ಮತ್ತು ಮಾಜಿ ದೇವದಾಸಿ ಮಹಿಳೆಯರ ಮಕ್ಕಳಿಗೆ ಅದ್ಯತೆ ನೀಡಲಾಗುವುದು. ದಾಖಲಾಧಿಕಾರಿ 1 ಹುದ್ದೆಗೆ ಬಿಕಾಂ ಪದವಿ ಹಾಗೂ ತತ್ಸಮಾನ ಪದವಿ ಮತ್ತು ಕಂಪ್ಯೂಟರ್ ಜ್ಞಾನ ಕಡ್ಡಾಯ ಹೊಂದಿರಬೇಕು. ಕಂಪ್ಯೂಟರ್ ಜ್ಞಾನ ಮತ್ತು ಕನ್ನಡ/ಇಂಗ್ಲಿಷ ಟೈಪಿಂಗ್ ಜ್ಞಾನ ಕಡ್ಡಾಯ ಹೊಂದಿರಬೇಕು. ಲೆಕ್ಕಿಗರು ಗುಮಾಸ್ತ 1 ಹುದ್ದೆಗೆ ದ್ವಿತಿಯ ಪಿಯುಸಿ ಅಥವಾ ತತ್ಸಮಾನ ಹಾಗೂ ಕಂಪ್ಯೂಟರ್ ಜ್ಞಾನ ಕಡ್ಡಾಯ ಹೊಂದಿರಬೇಕು. ಸ್ವಯಂ ಸೇವಕಿಯರ 5 ಹುದ್ದೆಗೆ ಮಾಜಿ ದೇವದಾಸಿಯರನ್ನು/ ಕುಟುಂಬದವರನ್ನು ಆಯ್ಕೆ ಮಾಡಿಕೊಳ್ಳಲಾಗುವುದು. ಕಚೇರಿ ಸಹಾಯಕ 1 ಹುದ್ದೆಗೆ ಏಳನೇ ತರಗತಿ ಉತ್ತೀರ್ಣರಾದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.

ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಯೋಜನಾ ಅನುಷ್ಠಾನಾಧಿಕಾರಿಗಳು ಹುದ್ದೆಗಳನ್ನು ಅನುಭವ ಮತ್ತು ಕಾರ್ಯಕ್ಷಮತೆ ಆಧಾರದ ಮೇಲೆ ಜಿಲ್ಲಾ ಆಯ್ಕೆ ಸಮಿತಿ ಒಪ್ಪಿದಲ್ಲಿ ಹಾಗೂ ಈ ಹುದ್ದೆಗಳ ಅನುಸಾರ ಆಸಕ್ತರು ಅರ್ಜಿಗಳನ್ನು ಫೆ.21 ರೊಳಗಾಗಿ ಕಚೇರಿ ಸಮಯದಲ್ಲಿ ದ್ವಿಪ್ರತಿ ಮುಚ್ಚಳಿಕೆ ಲಕೋಟೆಯಲ್ಲಿ ಕಚೇರಿ ವಿಳಾಸ:ಯೋಜನಾಧಿಕಾರಿಗಳು ದೇವದಾಸಿ ಪುನರ್ವಸತಿ ಯೋಜನೆ ಮನೆ ಸಂಖ್ಯೆ: 1–5–166 ಸ್ಟಾರ್ ಫಂಕ್ಷನ್ ಹಾಲ್ ಎದುರಗಡೆ ಬಾಲಜಿ ಕಾಂಪ್ಲೇಕ್ಸ್ ಹತ್ತಿರ ಗುಡ್‌ಶಡ್ ಏರಿಯಾ ರಾಯಚೂರು ಇಲ್ಲಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಚೇರಿ ನಿರ್ವಾಹಕ ದೂರವಾಣಿ/ಮೊಬೈಲ್ ಸಂಖ್ಯೆ: 9980879540ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶ್ರೀಶೈಲಂ ಜಾತ್ರೆ ಅಂಗವಾಗಿ ವಿಶೇಷ ಬಸ್ಸುಗಳ ಕಾರ್ಯಾಚರಣೆ

**ರಾಯಚೂರು ಫೆ,11–** ಫೆ.10 ರಿಂದ ಫೆ.18ರವರೆಗೆ ಶ್ರೀಶೈಲಂ ಜಾತ್ರೆಯು ನಡೆಯುತ್ತಿದೆ. ಫೆ.15ರಂದು ಮಹಾಶಿವರಾತ್ರಿ ಹಬ್ಬದ ಪ್ರಯುಕ್ತ ಶ್ರೀಶೈಲದ ಶ್ರೀ ಮಲ್ಲಿಕಾರ್ಜುನ ಸ್ವಾಮಿಯ ರಥೋತ್ಸವ ಜರುಗಲಿರುವ ಪ್ರಯುಕ್ತ ಶ್ರೀಶೈಲಂ ಶ್ರೀಮಲ್ಲಿಕಾರ್ಜುನ ಜಾತ್ರಗೆ ರಾಯಚೂರು ವಿಭಾಗದ ವ್ಯಾಪ್ತಿಯಲ್ಲಿ ಬರುವ ರಾಯಚೂರು, ಲಿಂಗಸೂಗುರು, ಸಿಂಧನೂರು, ಮಾನವಿ, ದೇವದುರ್ಗ, ಮಸ್ಕಿ ಘಟಕಗಳಿಂದ ವಿಶೇಷ ಬಸ್ಸುಗಳ ಕಾರ್ಯಾಚರಣೆಯನ್ನು ಆರಂಭಿಸಲಾಗಿದೆ. ಈ ಜಾತ್ರೆಗೆ ಪ್ರತಿ ವರ್ಷದಂತೆ ಈ ವರ್ಷವು ಸಹ ರಾಯಚೂರು ವಿಭಾಗದ ವ್ಯಾಪ್ತಿಯಲ್ಲಿ ಬರುವ ರಾಯಚೂರು–ಕರ್ನೂಲ್– ಶ್ರೀಶೈಲಂ, ಸಿಂಧನೂರು– ಆದೋನಿ– ಶ್ರೀಶೈಲಂ, ಸಿಂಧನೂರು– ರಾಯಚೂರು– ಕರ್ನೂಲ್– ಶ್ರೀಶೈಲಂ, ಲಿಂಗಸೂಗುರು– ರಾಯಚೂರು– ಕರ್ನೂಲ್– ಶ್ರೀಶೈಲಂ, ಲಿಂಗಸೂಗುರು– ಮಸ್ಕಿ– ಸಿಂಧನೂರು– ಆದೋನಿ– ಶ್ರೀಶೈಲಂ, ಮಾನವಿ– ರಾಯಚೂರು– ಕರ್ನೂಲ್– ಶ್ರೀಶೈಲಂ, ದೇವದುರ್ಗ– ರಾಯಚೂರು– ಕರ್ನೂಲ್– ಶ್ರೀಶೈಲಂ, ಮಸ್ಕಿ– ರಾಯಚೂರು– ಕರ್ನೂಲ್– ಶ್ರೀಶೈಲಂ, ಮಸ್ಕಿ– ಸಿಂಧನೂರು– ಆದೋನಿ– ಶ್ರೀಶೈಲಂ ಮಾರ್ಗದಲ್ಲಿ ಕಾರ್ಯಾಚರಣೆಗೆ ತರಲಾಗುತ್ತಿದೆ.50 ಪ್ರಯಾಣಿಕರು ಲಭ್ಯ ಇದ್ದಲ್ಲಿ ಅವರ ಸ್ವ–ಸ್ಥಳದಿಂದ ನೇರವಾಗಿ ಶ್ರೀಶೈಲಂಗೆ ಬಸ್ಸು ವ್ಯವಸ್ಥೆಯನ್ನು ಒದಗಿಸುವದಕ್ಕೆ ಕ್ರಮವನ್ನು ತೆಗೆದುಕೊಳ್ಳಲಾಗಿದೆ. ಹಾಗೂ ಪ್ರಯಾಣಿಕರು ಮಹಾನಂದಿಗೆ ಹೋಗುವದಕ್ಕೆ ಇಷ್ಟ ಪಟ್ಟಲ್ಲಿ, ಅಲ್ಲಿಗೆ ಕರೆದುಕೊಂಡು ಹೋಗಿ ಬರಲಾಗುತ್ತಿದ್ದು, ಶ್ರೀಶೈಲಂಗೆ ಹೋಗಿ ಬರುವ ಪ್ರಯಾಣಿಕರು ಈ ವಿಶೇಷ ಬಸ್ಸುಗಳ ಸೌಕರ್ಯವನ್ನು ಪಡೆದುಕೊಳ್ಳಬಹುದಾಗಿದೆ.ಹೆಚ್ಚಿನ ಮಾಹಿತಿಗಾಗಿ 1ನೇ ಘಟಕ ರಾಯಚೂರು: 7760992363, 2ನೇ ಘಟಕ ರಾಯಚೂರು: 7760992364, 3ನೇ ಘಟಕ ರಾಯಚೂರು: 7619351087, ಲಿಂಗಸೂಗುರು: 7760992365, ಸಿಂಧನೂರು: 7760992366, ಮಾನವಿ: 7760992367, ದೇವದುರ್ಗ: 7760992368, ಮಸ್ಕಿ: 7760992361 ಅಥವಾ ವಿಭಾಗೀಯ ಸಂಚಾರ ಅಧಿಕಾರಿ: 7760992352ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ನಿಯಂತ್ರಣಾಧಿಕಾರಿಗಳಾದ ಚಂದ್ರಶೇಖರ ಎಂ.ಎಸ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 6ನೇ ತರಗತಿ ಪ್ರವೇಶಕ್ಕೆ ಅರ್ಜಿ ಸಲ್ಲಿಸಲು ಫೆ.28 ಕೊನೆಯ ದಿನ

**ರಾಯಚೂರು ಫೆ,11–** ಇಲ್ಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2026–27ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆಗಳಲ್ಲಿ 6ನೇ ತರಗತಿಗೆ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿಯ ದಿನಾಂಕವನ್ನು ಫೆ.28ರವರೆಗೆ ವಿಸ್ತರಿಸಲಾಗಿದೆ. ಜಿಲ್ಲೆಯ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ರಾಯಚೂರು (ಬೋಳಮಾನದೊಡ್ಡಿ ರಸ್ತೆ), ಗಿಲ್ಲೆಸೂಗೂರು (ಚಂದ್ರಬಂಡಾ ರಸ್ತೆ), ಯರಮರಸ್ ಕ್ಯಾಂಪ್, ಗಿಲ್ಲೆಸುಗೂರು ಕ್ಯಾಂಪ್, ಮಾನವಿ, ಸಿಂಧನೂರು, ಚನ್ನಹಳ್ಳಿ, ಮಸ್ಕಿ, ಲಿಂಗಸೂಗೂರು, ಸಿರವಾರ, ದೇವದುರ್ಗ ಮತ್ತು ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ, ಯರಮರಸ್ ಕ್ಯಾಂಪ್ ರಾಯಚೂರಿನಲ್ಲಿ 6ನೇ ತರಗತಿಯಿಂದ 10ನೇ ತರಗತಿಯ ವರೆಗೆ ಆಂಗ್ಲ ಮಾಧ್ಯಮದಲ್ಲಿ ವ್ಯಾಸಂಗ ಮಾಡಲು ಅಲ್ಪಸಂಖ್ಯಾತರ ಸಮುದಾಯಕ್ಕೆ ಶೇ.75 ರಷ್ಟು ಸ್ಥಾನಗಳನ್ನು ಮತ್ತು ಶೇ.25 ರಷ್ಟು ಸ್ಥಾನಗಳನ್ನು ಇತರ ವರ್ಗದವರಿಗೆ ಮೀಸಲಿರಿಸಲಾಗಿದೆ.ಅರ್ಹ ವಿದ್ಯಾರ್ಥಿಗಳಿಗೆ ಆನ್‌ಲೈನ್ ಸೇವಾಸಿಂಧು: Website:https://sevasindhuservices.karnataka. gov.in ನಲ್ಲಿ ಫೆ.28ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಸಹಾಯವಾಣಿ ಸಂಖ್ಯೆ: 8277799990, 08022535902ರಾಯಚೂರು: 8496098631, 9731028420, 9731341815, 9686853719, 6361866571, 9108175899, 9902906266 ಮಾನವಿ, ಸಿರವಾರ: 7411771075, 886733478, ದೇವದುರ್ಗ: 9731794252, 9148233616, ಲಿಂಗಸೂಗೂರು, ಮಸ್ಕಿ ಮತ್ತು ಸಿಂಧನೂರು: 8217621732, 9740871306, 8660879712ಗೆ ಸಂಪರ್ಕಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 1 ರಿಂದ 19 ವರ್ಷದೊಳಗಿನ ಮಕ್ಕಳಿಗೆ ಆಲ್‌ಬೆಂಡಜೋಲ್ ಮಾತ್ರೆ ಸೇವನೆ ಅಗತ್ಯ




**ಯಾದಗಿರಿ:ಫೆ.11:**ದೇಶದಾದ್ಯಂತ "ರಾಷ್ಟ್ರೀಯ ಜಂತು ಹುಳ ನಿವಾರಣಾ ಕಾರ್ಯಕ್ರಮ" (ಎನ್‌ಡಿಡಿ) ಅಂಗವಾಗಿ ಫೆಬ್ರವರಿ 10ರಿಂದ 16ರವರೆಗೆ ಮೋಪ್–ಅಪ್ ಡೇ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, 1 ರಿಂದ 19 ವರ್ಷದೊಳಗಿನ ಎಲ್ಲಾ ಮಕ್ಕಳು ಆಲ್‌ಬೆಂಡಜೋಲ್–400 ಮಿ.ಗ್ರಾಂ ಮಾತ್ರೆ ಸೇವಿಸಿ ಕಾರ್ಯಕ್ರಮದ ಸದುಪಯೋಗ ಪಡೆಯಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಲವೀಶ್ ಒರಡಿಯಾ ಅವರು ಸಲಹೆ ನೀಡಿದರು.

ನಗರದ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆ, ಸ್ಟೇಷನ್ ಬಜಾರ್ ಶಾಲೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಆರ್.ಸಿ.ಹೆಚ್ ವಿಭಾಗದ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

1 ರಿಂದ 19 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಆಲ್‌ಬೆಂಡಜೋಲ್ ಮಾತ್ರೆಗಳನ್ನು ವಿತರಿಸಲಾಗುತ್ತಿದ್ದು, ಪೋಷಕರು ಹಾಗೂ ಸಾರ್ವಜನಿಕರು ತಮ್ಮ ಮಕ್ಕಳಿಗೆ ಕಡ್ಡಾಯವಾಗಿ ಮಾತ್ರೆ ಸೇವಿಸುವಂತೆ ನೋಡಿಕೊಳ್ಳಬೇಕು ಎಂದು ಅವರು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ. ಮಹೇಶ ಬಿರಾದಾರ ಅವರು ಮಾತನಾಡಿ, 1 ರಿಂದ 5 ವರ್ಷದೊಳಗಿನ ಮಕ್ಕಳಿಗೆ ಅಂಗನವಾಡಿ ಕೇಂದ್ರಗಳಲ್ಲಿ ಮಾತ್ರೆಗಳನ್ನು ನೀಡಲಾಗುತ್ತದೆ. 6 ರಿಂದ 19 ವರ್ಷದ ಮಕ್ಕಳಿಗೆ ಸರಕಾರಿ, ಅನುದಾನಿತ ಹಾಗೂ ಖಾಸಗಿ ಶಾಲೆಗಳು, ಕಾಲೇಜುಗಳು ಹಾಗೂ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಮೂಲಕ ಮಾತ್ರೆ ವಿತರಣೆ ನಡೆಯಲಿದೆ. ಶಾಲೆಯಿಂದ ಹೊರಗುಳಿದ ಮಕ್ಕಳ ಪಟ್ಟಿಯನ್ನು ಆಶಾ ಕಾರ್ಯಕರ್ತೆಯರು ಸಿದ್ದಪಡಿಸಿ, ಅವರಿಗೆ ಅಂಗನವಾಡಿ ಕೇಂದ್ರಗಳ ಮೂಲಕ ಮಾತ್ರೆಗಳನ್ನು ನೀಡಲಾಗುತ್ತದೆ ಎಂದು ಹೇಳಿದರು.

1 ರಿಂದ 2 ವರ್ಷದೊಳಗಿನ ಮಕ್ಕಳಿಗೆ ಅರ್ಧ ಮಾತ್ರೆ ಹಾಗೂ 2 ರಿಂದ 19 ವರ್ಷದೊಳಗಿನ ಮಕ್ಕಳಿಗೆ ಒಂದು ಪೂರ್ಣ ಆಲ್‌ಬೆಂಡಜೋಲ್ ಮಾತ್ರೆ ನೀಡಲಾಗುತ್ತದೆ ಎಂದು ಅವರು ಮಾಹಿತಿ ನೀಡಿದರು.

ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿಗಳಾದ ಡಾ. ಮಲ್ಲಪ್ಪ ಕೆ. ಅವರು ಮಾತನಾಡಿ, ಜಿಲ್ಲೆಯಲ್ಲಿ ಒಟ್ಟು 1 ರಿಂದ 19 ವರ್ಷದೊಳಗಿನ 5,13,173 ಮಕ್ಕಳನ್ನು ಗುರಿಯಾಗಿಟ್ಟುಕೊಂಡು ಕಾರ್ಯಕ್ರಮ ಜಾರಿಗೆ ತರಲಾಗಿದೆ. ಇದರಲ್ಲಿ ಅಂಗನವಾಡಿ ಮಕ್ಕಳು 1,51,542, ಅಂಗನವಾಡಿಯಿಂದ ಹೊರಗುಳಿದ ಮಕ್ಕಳು 7,577, ವಿವಿಧ ಶಾಲೆಗಳ ಮಕ್ಕಳು 3,61,631, ಪದವಿ ಪೂರ್ವ ವಿದ್ಯಾರ್ಥಿಗಳು 18,678 ಹಾಗೂ ಐಟಿಐ ಮತ್ತು ತಾಂತ್ರಿಕ ಸಂಸ್ಥೆಗಳ ವಿದ್ಯಾರ್ಥಿಗಳು 1,956 ಮಂದಿ ಒಳಗೊಂಡಿದ್ದಾರೆ ಎಂದು ತಿಳಿಸಿದರು. ಕಾರ್ಯಕ್ರಮ ಯಶಸ್ವಿಗೆ ಇತರೆ ಇಲಾಖೆಗಳ ಸಹಕಾರ ಅಗತ್ಯವಿದೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ. ಸಂಜೀವಕುಮಾರ ರಾಯಚೂರಕರ್, ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಡಾ. ಸಾಜೀದ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಹಣಮಂತರೆಡ್ಡಿ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಜಗನ್ನಾಥ್, ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕರಾದ ಮನೋಹರ್ ಪಾಟೀಲ್, ಶಂಕರಾನಂದ ತಾಳಿಕೋಟಿ, ಸುರೇಶ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ವಿನುತಾ ಸೇರಿದಂತೆ ಆರೋಗ್ಯ ಇಲಾಖೆ ಅಧಿಕಾರಿಗಳು, ಸಿಬ್ಬಂದಿ, ವಿವಿಧ ಇಲಾಖೆಗಳ ಪ್ರತಿನಿಧಿಗಳು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ತುಳಸಿರಾಮ ಅವರು ಕಾರ್ಯಕ್ರಮ ನಿರೂಪಣೆ ನೆರವೇರಿಸಿದರು. ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಲಕ್ಷ್ಮೀ ಮುಂಡಾಸ್ ಸ್ವಾಗತಿಸಿದರು. ಜಿಲ್ಲಾ ಆರ್.ಕೆ.ಎಸ್.ಕೆ ಸಂಯೋಜಕರಾದ ರಾಣೋಜಿ ಪ್ರಭುಲಿಂಗ ವಂದನಾರ್ಪಣೆ ಸಲ್ಲಿಸಿದರು.

# ಹೈಕಮಾಂಡ್ ವರ್ಸಸ್ ಕಾಲ

**ಬೆಂಗಳೂರು, ಫೆ. 10–** ರಾಜ್ಯದಲ್ಲಿ ನಾಯಕತ್ವ ಬದಲಾವಣೆ ವಿಚಾರ ಬೂದಿ ಮುಚ್ಚಿದ ಕೆಂಡದಂತಿರುವಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಡುವೆ ಮಾತಿನ ಭರಾಟೆ ಜೋರಾಗಿದ್ದು, ಮಾತು ಪ್ರತಿಮಾತು ಬಿರುಸಾಗಿದೆ. ಸಿದ್ದರಾಮಯ್ಯ ಹೈಕಮಾಂಡ್ ಮೇಲಿನ ತಮ್ಮ ನಂಬಿಕೆಯನ್ನು ಪುನರುಚ್ಚರಿಸಿದರೆ, ಡಿ.ಕೆ. ಶಿವಕುಮಾರ್ ಕಾಲದ ಮೇಲಿನ ನಂಬಿಕೆಯನ್ನು ವ್ಯಕ್ತಪಡಿಸಿದ್ದಾರೆ.



ಅಧಿಕಾರ ಹಂಚಿಕೆ ವಿಚಾರದಲ್ಲಿ ಹೈಕಮಾಂಡ್ ತೀರ್ಮಾನವೇ ಅಂತಿಮ. ಹೈಕಮಾಂಡ್ ತೀರ್ಮಾನಕ್ಕೆ ನಾನು ಬದ್ಧ ಎಂದು ಈಗಾಗಲೇ ಹಲವು ಬಾರಿ ಪುನರುಚ್ಚರಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದೂ ಸಹ ಅದೇ ಮಾತುಗಳನ್ನು ಪುನರಾವರ್ತಿಸಿದ್ದಾರೆ.ಬೆಂಗಳೂರಿನ ಶಕ್ತಿ ಭವನದಲ್ಲಿ ಬಜೆಟ್ ಪೂರ್ವಭಾವಿ ಸಭೆ ನಡೆಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಸಂದರ್ಭದಲ್ಲಿ ಅಧಿಕಾರ ಹಂಚಿಕೆ ವಿಚಾರದಲ್ಲಿ ಹೈಕಮಾಂಡ್ ತೀರ್ಮಾನವೇ ಅಂತಿಮ. ಹೈಕಮಾಂಡ್ ಹೇಳಿದಂತೆ ನಾನು, ಡಿ.ಕೆ.ಶಿವಕುಮಾರ್ ನಡೆದುಕೊಳ್ಳಬೇಕು ಎಂದು ಸ್ಪಷ್ಟವಾಗಿ ತಿಳಿಸಿದರು.

ಕಳೆದ ಮೂರು ತಿಂಗಳಿಂದ ಮಾಧ್ಯಮದವರಾದ ನೀವು ಪ್ರತಿ ಬಾರಿಯೂ ಇದೇ ಪ್ರಶ್ನೆ ಕೇಳುತ್ತಿದ್ದೀರಿ. ಬೇರೆ ಪ್ರಶ್ನೆ ಕೇಳಕ್ಕೋ ಆಗಲ್ವ ಎಂದು ಮಾಧ್ಯಮದವರ ವಿರುದ್ಧ ಗರಂ ಆದ ಮುಖ್ಯಮಂತ್ರಿಗಳು, ನಾನು ಹಿಂದೆಯೇ ಹೇಳಿದ್ದೇನೆ. ಈಗಲೂ ಹೇಳುತ್ತೇನೆ. ಹೈಕಮಾಂಡ್ ಮಾತೆ ಅಂತಿಮ. ಹೈಕಮಾಂಡ್ ಯಾವುದೇ ತೀರ್ಮಾನ ಕೈಗೊಂಡರೂ ನಾನು ಅದಕ್ಕೆ ಬದ್ಧ. ಅದಕ್ಕೆ ಡಿ.ಕೆ. ಶಿವಕುಮಾರ್ ಸಹ ಒಪ್ಪಿಕೊಳ್ಳಲೇಬೇಕು ಎಂದರು ಪದೇ ಪದೇ ಇದೇ ಪ್ರಶ್ನೆ ಕೇಳಬೇಡಿ. ಎಲ್ಲವನ್ನೂ ಹೈಕಮಾಂಡ್ ತೀರ್ಮಾನ ಮಾಡುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.ಮುಖ್ಯಮಂತ್ರಿ ಸಿದ್ದರಾಮಯ್ಯ ನಿಧಾನವಾದರೂ ಸರಿ ಕುರ್ಚಿ ಬಿಟ್ಟುಕೊಡುತ್ತಾರೆ ಎಂಬ ವಿಶ್ವಾಸವಿದೆ ಎಂಬ ಮಾಜಿ ಸಂಸದ ಡಿ.ಕೆ.ಸುರೇಶ್ ಹೇಳಿಕೆಗೆ ಪ್ರತಿಕ್ರಿಯಿಸಲು ನಿರಾಕರಿಸಿದ ಅವರು, ಸಿಟ್ಟಿನಿಂದಲೇ ಅದನ್ನು ನನ್ನೇಕೆ ಕೇಳುತ್ತೀರಿ. ಯಾರು ಮಾತನಾಡಿದ್ದಾರೋ ಅವರನ್ನೇ ಕೇಳಿ. ಅದು ಬಿಟ್ಟು ಬೇರೆ ಏನು ಕೇಳೋಕೆ ಬರಲ್ವಾ ನಿಮಗೆ. ಇನ್ಮುಂದೆ ಇದನ್ನು ಮತ್ತೆ ಕೇಳಬೇಡಿ. ಹೈಕಮಾಂಡ್‌ಗೆ ಎಲ್ಲವೂ ಗೊತ್ತಿದೆ. ಹೈಕಮಾಂಡ್ ಎಲ್ಲವನ್ನೂ ತೀರ್ಮಾನಿಸುತ್ತದೆ. ಹೈಕಮಾಂಡ್ ತೀರ್ಮಾನಕ್ಕೆ ನಾವೆಲ್ಲ ಬದ್ಧ ಎಂದರು.

ಹೈಕಮಾಂಡ್ ಏನು ತೀರ್ಮಾನ ತೆಗೆದುಕೊಳ್ಳುತ್ತದೋ ಅದರಂತೆ ನಡೆದುಕೊಳ್ಳುವವನು ನಾನು. ಉಪಮುಖ್ಯಮಂತ್ರಿಗಳು ಹೈಕಮಾಂಡ್ ತೀರ್ಮಾನದಂತೆ ನಡೆದುಕೊಳ್ಳಬೇಕು ಎಂದು ಹೇಳಿದರು.

ಹಬ್ಬದ ನಂತರ ಬಜೆಟ್ ದಿನಾಂಕ–ಶಿವರಾತ್ರಿ ಹಬ್ಬದ ನಂತರ ರಾಜ್ಯ ಬಜೆಟ್ ಮಂಡನೆಯ ದಿನಾಂಕವನ್ನು ತಿಳಿಸುತ್ತೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಬಜೆಟ್ ಪೂರ್ವಭಾವಿ ಸಭೆಗಳು ಮುಗಿದಿವೆ. ಬಜೆಟ್ ಮಂಡನೆ ದಿನಾಂಕ ನಿಗದಿಯಾಗಿದೆಯೇ ಎಂಬ ಪ್ರಶ್ನೆಗೆ ಶಿವರಾತ್ರಿ ಹಬ್ಬ ಕಳೆಯಲಿ ಬಜೆಟ್ ದಿನಾಂಕವನ್ನು ತಿಳಿಸುತ್ತೇನೆ ಎಂದರು. ಸ್ವಂತ ಖರ್ಚಿನಲ್ಲಿ ಪ್ರವಾಸ–ರಾಜ್ಯದ ಕೆಲ ಶಾಸಕರು ವಿದೇಶಿ ಪ್ರವಾಸ ಕೈಗೊಳ್ಳುತ್ತಿದ್ದಾರೆ ಎಂದು ಕೇಳಲಾದ ಪ್ರಶ್ನೆಗೆ, ಶಾಸಕರು ತಮ್ಮ ಸ್ವಂತ ಖರ್ಚಿನಲ್ಲಿ ವಿದೇಶ ಪ್ರವಾಸ ಮಾಡುತ್ತಿದ್ದಾರೆ. ಅದನ್ನು ಬೇಡ ಎಂದು ಹೇಳಲು ಆಗುತ್ತದೆಯೇ ಎಂದು ಪ್ರಶ್ನಿಸಿದರು.ರಾಜ್ಯದ ಕೆಲ ಶಾಸಕರು ಸ್ವಂತ ಖರ್ಚಿನಲ್ಲಿ ವಿದೇಶಿ ಪ್ರವಾಸ ಮಾಡುತ್ತಿದ್ದಾರೆ. ಆ ಬಗ್ಗೆ ನನಗೆ ಮಾಹಿತಿ ಇದೆ ಎಂದಷ್ಟೇ ಹೇಳಿದರು .

ಎಲ್ಲದಕ್ಕೂ ಕಾಲವೇ ಉತ್ತರ–ನಾಯಕತ್ವ ಬದಲಾವಣೆ ಸೇರಿದಂತೆ ಎಲ್ಲದಕ್ಕೂ ಕಾಲವೇ ಉತ್ತರ ನೀಡುತ್ತದೆ ಎಂಬ ತಮ್ಮ ಮಾತುಗಳನ್ನು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇಂದು ಮತ್ತೆ ಪುನರುಚ್ಚರಿಸಿದ್ದಾರೆ.ವರಿಷ್ಠರ ಭೇಟಿಗಾಗಿ ದೆಹಲಿಗೆ ತೆರಳಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ದೆಹಲಿಯಲ್ಲಿ ಯಾವೆಲ್ಲಾ ವರಿಷ್ಠರನ್ನು ಭೇಟಿ ಮಾಡಿದ್ದೇನೆ ಎಂಬ ಗುಟ್ಟು ಬಿಟ್ಟು ಕೊಡಲಿಲ್ಲ. ಯಾರನ್ನು ಭೇಟಿ ಮಾಡಿದ್ದೀರಾ ಎಂಬ ಸುದ್ದಿಗಾರರ ಪ್ರಶ್ನೆಗೆ ಎಲ್ಲದಕ್ಕೂ ಕಾಲವೇ ಉತ್ತರ ಕೊಡುತ್ತದೆ ಎಂದು ಮಾರ್ಮಿಕವಾಗಿ ಹೇಳಿದರು.ಮುಖ್ಯಮಂತ್ರಿ ಸಿದ್ದರಾಮಯ್ಯ ನಿಧಾನವಾದರೂ ಅಧಿಕಾರ ಬಿಟ್ಟುಕೊಡುತ್ತಾರೆ ಎಂಬ ಡಿ.ಕೆ. ಸುರೇಶ್ ಮಾತಿಗೂ ಸೂಕ್ಷ್ಮ ಪ್ರತಿಕ್ರಿಯೆ ನೀಡಿದ ಡಿಕೆಶಿ, ಎಲ್ಲದಕ್ಕೂ ಕಾಲವೇ ಉತ್ತರ ಎಂಬುದನ್ನು ಪುನರುಚ್ಚರಿಸಿದರು.ಪ್ರತಿ ಬಾರಿಯು ಕಾಲವೇ ಉತ್ತರ ಎಂದು ಹೇಳುತ್ತೀರಿ.ಯಾವಾಗ ಕಾಲ ಬರುತ್ತದೆ ಎಂಬ ಪ್ರಶ್ನೆಗೆ ಸಮಯ ನೋಡಿಕೊಂಡು ಹೇಳುತ್ತೇನೆ ಎಂದು ಚುಟುಕಾಗಿ ಉತ್ತರಿಸಿದರು.ದೆಹಲಿಯಲ್ಲಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪಕ್ಷದ ವರಿಷ್ಠರನ್ನು ಭೇಟಿ ಮಾಡುವ ಪ್ರಯತ್ನದಲ್ಲಿದ್ದು, ಯಾವ ನಾಯಕರನ್ನು ಭೇಟಿ ಮಾಡಿದ್ದೆ, ಭೇಟಿ ಮಾಡುತ್ತೇನೆ ಎಂದು ಗುಟ್ಟು ಬಿಟ್ಟುಕೊಡದೆ ಸುದ್ದಿಗಾರರ ಎಲ್ಲ ಪ್ರಶ್ನೆಗಳಿಗೂ ಕಾಲವೇ ಉತ್ತರ ಎಂದಷ್ಟೇ ಹೇಳಿದರು.

# ಹಿರಿಯ ಪತ್ರಕರ್ತ ಪಿ.ರಾಮಯ್ಯ ನಿಧನ: ಸಿಎಂ ಸೇರಿ ಗಣ್ಯರ ಕಂಬನಿ



**ಬೆಂಗಳೂರು:ಫೆ 11–** ಹಿರಿಯ ಪತ್ರಕರ್ತ ಹಾಗು ವಿಧಾನ ಪರಿಷತ್‌ನ ಮಾಜಿ ಸದಸ್ಯ ಪಿ.ರಾಮಯ್ಯ ಅವರು ಮಂಗಳವಾರ ರಾತ್ರಿ ನಿಧನರಾದರು ಅವರಿಗೆ 93 ವಯಸ್ಸಾಗಿದ್ದು ಇಬ್ಬರು ಪುತ್ರರು, ಓರ್ವ ಪುತ್ರಿ, ಸೊಸೆಯಂದಿರು ಹಾಗು ಮೊಮ್ಮಕ್ಕಳನ್ನು ಅಗಲಿದ್ದಾರೆ.

ನಗರದ ಮಲ್ಲಿಗೆ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಪಿ.ರಾಮಯ್ಯ, ವಿವಿಧ ಅಂಗಾಂಗ ವೈಫಲ್ಯದಿಂದಾಗಿ ಆಸ್ಪತ್ರೆಯಲ್ಲಿ ಅಸುನೀಗಿದರು ಎಂದು ಪುತ್ರ ಡಾ.ಬಾಲಜಿ ತಿಳಿಸಿದ್ದಾರೆ.

ದಿ ಹಿಂದು ದಿನಪತ್ರಿಕೆಯಲ್ಲಿ ಸುಮಾರು ಐದು ದಶಕಗಳ ಕಾಲ ವಿವಿಧ ಹುದ್ದೆಗಳಲ್ಲಿ ಕೆಲ ಮಾಡಿದ್ದ ರಾಮಯ್ಯ ಅವರು ವಿಧಾನ ಪರಿಷತ್ ಸದಸ್ಯರಾಗಿಯೂ ಸೇವೆ ಸಲ್ಲಿಸಿದ್ದರು.

ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಮಾಧ್ಯಮ ಅಕಾಡೆಮಿ ಪ್ರಶಸ್ತಿ, ಕೆಂಪೇಗೌಡ ಪ್ರಶಸ್ತಿಗೆ ಭಾಜನರಾಗಿದ್ದರು. ಪತ್ರಿಕಾ ಅಕಾಡೆಮಿ ಹಾಗು ವಿವಿಧ ಪತ್ರಕರ್ತ ಕಲ್ಯಾಣ ಸಮಿತಿಗಳ ಸದಸ್ಯರಾಗಿದ್ದರು. ಸಣ್ಣ ಪತ್ರಿಕೆಗಳ ಸಮಸ್ಯೆಗಳ ಅಧ್ಯಯನಕ್ಕಾಗಿ ರಚಿಸಲಾಗಿದ್ದ ಸಮಿತಿಯ ಅಧ್ಯಕ್ಷರಾಗಿದ್ದ ಇವರು, ಸಣ್ಣ ಪತ್ರಿಕೆಗಳ ಸಮಸ್ಯೆಗೆ ಪರಿಹಾರ ದೊರಕಿಸುವಲ್ಲಿ ಪ್ರಮುಖ ಪಾತ್ರವಹಿಸಿದ್ದರು.

ರಾಮಯ್ಯನವರ ಪಾರ್ಥಿವ ಶರೀರವನ್ನು ಸಾರ್ವಜನಿಕ ದರ್ಶನಕ್ಕಾಗಿ ಇಂದು ಬೆಳಗ್ಗೆ 9ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಅವರ ಸದಾಶಿವನಗರದ ಅವರ ಮನೆಯಲ್ಲಿ ಇಡಲಾಗಿತ್ತು. ನಂತರ ಮಧ್ಯಾಹ್ನ 3 ಗಂಟೆಯ ವೇಳೆಗೆ ಅಂತ್ಯಕ್ರಿಯೆ ನಡೆಸಲಾಗುವುದು ಎಂದು ಕುಟುಂಬ ಸದಸ್ಯರು ತಿಳಿಸಿದ್ದಾರೆ. ಹಿರಿಯ ಪತ್ರಕರ್ತ ಪಿ ರಾಮಯ್ಯ ಅವರ ಅಂತ್ಯಕ್ರಿಯೆಯನ್ನು ಪೊಲೀಸ್ ಗೌರವದೊಂದಿಗೆ ನಡೆಸಲು ಸರ್ಕಾರ ಆದೇಶ ಹೊರಡಿಸಿದೆ

ಗಣ್ಯರ ಸಂತಾಪ: ಪಿ.ರಾಮಯ್ಯ ಅಗಲಿಕೆಗೆ ಮಾಜಿ ಪ್ರಧಾನಿ ದೇವೇಗೌಡರು ಮುಖ್ಯಮಂತ್ರಿ ಸಿದ್ದರಾಮಯ್ಯ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಮಾಜಿ ಮುಖ್ಯಮಂತ್ರಿಗಳಾದ ಯಡಿಯೂರಪ್ಪ ಬಸವರಾಜ ಬೊಮ್ಮಾಯಿ ಎಚ್ ಡಿ ಕುಮಾರಸ್ವಾಮಿ ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಪ್ರತಿಪಕ್ಷ ನಾಯಕರಾದ ಆರ್ ಅಶೋಕ್ ಛಲವಾದಿ ನಾರಾಯಣಸ್ವಾಮಿ ಸಚಿವರಾದ ಚೆಲುವರಾಯಸ್ವಾಮಿ ಶಿವಾನಂದ ಪಾಟೀಲ್ ಎಚ್ ಕೆ ಪಾಟೀಲ್ ಎಂ ಬಿ ಪಾಟೀಲ್ ಸೇರಿದಂತೆ ಹಲವು ಸಚಿವರು ವಾರ್ತಾ ಇಲಾಖೆಯ ಆಯುಕ್ತ ಹೇಮಂತ್ ನಿಂಬಾಳ್ಕರ್ ಸೇರಿದಂತೆ ಹಲವು ಗಣ್ಯರು ಸಂತಾಪ ವ್ಯಕ್ತಪಡಿಸಿದ್ದಾರೆ .

# ಬೆಳಮಗಿ ದಂಪತಿಗಳ ಸೇವೆ ಶ್ಲಾಘನೀಯ: ಕೊಪ್ಪದ



**ಕಲಬುರಗಿ,ಫೆ.11–**ನಗರದ ಕಾಳೇ ಲೇಔಟ್‌ನಲ್ಲಿರುವ ದಿ ಆರ್ಟ ಇಂಟಿಗ್ರೇಷನ್ ಸೊಸಾಯಿಟಿ ದಿ ಆರ್ಟ ಇಂಟಿಗ್ರೇಶನ್ ಚಿತ್ರಕಲಾ ಮಹಾವಿದ್ಯಾಲಯದ ವಿದ್ಯಾರ್ಥಿಗಳ ಶೈಕ್ಷಣಿಕ ಕಲಾ ಶಿಬಿರದ ಹಂಪಿ ಭೂ ದೃಶ್ಯ ಕಲಾಕೃತಿಗಳ ಪ್ರದರ್ಶನವನ್ನು ಶಾಲಾ ಶಿಕ್ಷಣ ಇಲಾಖೆ ಅಪರ ಆಯುಕ್ತರ ಕಛೇರಿ ಹಿರಿಯ ಚಿತ್ರಕಲಾ ವಿಷಯ ಪರಿವೀಕ್ಷಕ ಶಿವಾಂನದ ಕೊಪ್ಪದ ಅವರು ಪ್ರದರ್ಶನ ಸಸಿಗೆ ನೀರು ಹಾಕಿ ಉದ್ಘಾಟಿಸಿದರು.

ಭೂ ದೃಶ್ಯಗಳನ್ನು ವೀಕ್ಷಿಸಿ ಕಲಾಕೃತಿಗಳು ಉತ್ತಮವಾಗಿವೆ ಎಂದು ಬಣ್ಣಿಸಿತ್ತಾ ಈ ಮಹಾವಿದ್ಯಾಲಯದಲ್ಲಿ ಕಲಿತ ವಿದ್ಯಾರ್ಥಿಗಳಲ್ಲಿ ಮೂವರು ಉಪನ್ಯಾಸಕರಾಗಿದ್ದು ಹೆಮ್ಮೆ ವಿಷಯವಾಗಿದೆ. ಪ್ರಸುತ್ತ ರಾಜ್ಯದಲ್ಲಿ ಚಿತ್ರಕಲಾ ಮಹಾವಿದ್ಯಾಲಯಗಳು ಅಳಿವಿನ ಅಂಚಿನಲ್ಲಿವೆ ಆದರೂ ಸಂಸ್ಥೆಗಾಗಿ ಬೆಳಮಗಿ ದಂಪತಿಗಳು ಹಗಲು ರಾತ್ರಿ ಪರಿಶ್ರಮದಿಂದ ಇಷ್ಟು ಹೆಮ್ಮರವಾಗಿ ಬೆಳೆಯಲು ಕಷ್ಟ ನಷ್ಟ ಲೆಕ್ಕಿಸದೆ ಸಮಾಜದಲ್ಲಿ ಉತ್ತಮ ಶಿಕ್ಷಣ ನೀಡುತ್ತಿರುವುದು ಶ್ಲಾಘನೀಯವಾಗಿದೆ ಎಂದರು.

ಚಿತ್ರಕಲಾ ಶಿಕ್ಷಕರ ಸಂಘ ಜಿಲ್ಲಾ ಅಧ್ಯಕ್ಷ ಶಾಂತಮಲ್ಲ ಶಿವಭೋ ಮಾತನಾಡುತ್ತಾ ಹಿಂದೆ ಈ ಚಿತ್ರಕಲಾ ಮಹಾವಿದ್ಯಾಲಯದಲ್ಲಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿರುವ ನೆನಪಿಸಿಕೊಂಡು ಇಲ್ಲಿ ಕಲಿತ ವಿದ್ಯಾರ್ಥಿಗಳು ವಿಶೇಷ ಚಿತ್ರಕಲಾ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವುದು ಹೆಮ್ಮಯವಿಷಯವಾಗಿದೆ ಎಂದು ಹೇಳಿದರು.

ಕಲಾವಿದ, ಚಿತ್ರಕಲಾ ಶಿಕ್ಷಕ ದೌಲತರಾಯ ದೇಸಾಯಿ ಮಾತನಾಡುತ್ತಾ ಚಿತ್ರಕಲಾಮಹಾವಿದ್ಯಾಲಯ ಎಲ್ಲಾ ಮೂಲಭೂತ ಸೌಕರ್ಯ ಮತ್ತು ಉತ್ತಮ ಉಪನ್ಯಾಸಕರ ಮಾರ್ಗದರ್ಶನದಲ್ಲಿ ಶಿಕ್ಷಣ ಉತ್ತಮವಾದ ಬದುಕು ಕಟ್ಟಿಕೊಳ್ಳಬೇಕೆಂದು ಕಿವಿಮಾತು ಹೇಳಿದರು.

ದಿ ಆರ್ಟ ಇಂಟಿಗೇಶನ್ ಚಿತ್ರಕಲಾ ಮಹಾವಿದ್ಯಾಲ ಪ್ರಾಚಾರ್ಯ ಎಂ ಹೆಚ್. ಬೆಳಮಗಿ ಅಧ್ಯಕ್ಷತೆವಹಿಸಿ ಮಾತನಾಡುತ್ತಾ ವಿದ್ಯಾರ್ಥಿ ಜೀವನ ಎಂದರೆ ಬಂಗಾರದಂತೆ ಅದನ್ನು ವ್ಯರ್ಥಮಾಡದೆ ವಿದ್ಯಾರ್ಥಿಗಳು ತಮ್ಮ ಉನ್ನತಿಗಾಗಿ ಸತತ ಪ್ರಯತ್ನ ಪಡಬೇಕು ಎಂದು ಹೇಳಿದರು.

ಪ್ರದರ್ಶನ ಫೆ 14 ರವರೆಗೆ ಬೆಳಗ್ಗೆ 10:30 ರಿಂದ 4:30 ರವರೆಗೆ ಸಾರ್ವಜನಿಕರು, ಕಲಾಆಸಕ್ತರು ವೀಕ್ಷಿಸಬಹುದು. ಉಪನ್ಯಾಸಕರಾದ ಡಾ ಅಶೋಕ ಶೆಟಕಾರ,ಬಸವರಾಜ ಕಮಾಜಿ ನಿಂಗಪ್ಪ ಕೇರಿ ಸಿಬ್ಬಂದಿವರ್ಗದವರು, ಕಾವ್ಯಾ ಕುಲಕರ್ಣಿ,ಪವಿತ್ರಾ ಜೆ ಸ್ವಾಗತಗೀತೆಹಾಡಿದರು. ಮಲ್ಲಿಕಾರ್ಜುನ ಮುಗಳಿ ಸ್ವಾಗತಿಸಿದರು. ಬಿ ಎನ್ ಪಾಟೀಲ ನಿರೂಪಿಸಿದರು. ಗೌರಿ ಪಾಟೀಲ ವಂದಿಸಿದರು.ಹಿರಿಯ ಚಿತ್ರಕಲಾವಿದ ವಿ ಬಿ ಬಿರಾದಾರ, ನಾರಾಯಣ ಎಂ ಜೋಶಿ, ಬಾಬುರಾವ ಎಚ್. ಶರಣು ಪಟ್ಟಣಶೆಟ್ಟಿ, ಡಾ ಪರಶುರಾಮ, ಜಲಜಾ ಕುಲಕರ್ಣಿ, ಕವಿತಾ ಕಟ್ಟೆ ಮುಂತಾದವರು ಉಪಸ್ಥಿತರಿದ್ದರು.

# ದೇವಸ್ಥಾನದ ಅಭಿವೃದ್ಧಿಗೆ ಭಕ್ತರ ಸಹಕಾರ ಅತಿಮುಖ್ಯ



**ಸೈದಾಪುರ:ಫೆ.11:**ದೇವಸ್ಥಾನ ಅಭಿವೃದ್ಧಿಯಲ್ಲಿ ಭಕ್ತರ ಸಹಕಾರ ಅತಿಮುಖ್ಯವಾಗಿದ್ದೂ ಬಸವರಾಜಪ್ಪಗೌಡ ಮಾಲಿ ಪಾಟೀಲ ಸಾವೂರ ಪರಿವಾರ ದೇವಸ್ಥಾನಕ್ಕೆ ನೂತನ ಭವನ ನಿರ್ಮಾಣಮಾಡಿ ಕೊಡುವ ಮೂಲಕ ಇತರರಿಗೆ ಮಾದರಿಯಾಗಿದ್ದಾರೆ ಎಂದು ಶ್ರೀ ಸಿದ್ಧಾರೂಡ ಮಠದ ಶ್ರೀ ಸೋಮೇಶ್ವರನಂದ ಮಹಾಸ್ವಾಮಿಗಳು ಅಭಿಪ್ರಾಯಪಟ್ಟರು.

ಸಮೀಪದ ಆನೂರ.ಕೆ ಗ್ರಾಮದ ಹುಡೇದ ಯಲ್ಲಮ್ಮ ದೇವಸ್ಥಾನದಲ್ಲಿ ನೀಲಮ್ಮಗೌಡಸಾನಿ ಬಸವರಾಜಪ್ಪಗೌಡ ಮಾಲಿಪಾಟೀಲ ಸಾವೂರು ಭಕ್ತರಿಂದ ನಿರ್ಮಾಣ ಮಾಡಲಾದ ನೂತನ ಭವನ ಉದ್ಘಾಟಿಸಿ ಮಾತನಾಡಿದರು. ತಂದೆ ತಾಯಿಗಳು ಉತ್ತಮ ಸಂಸ್ಕಾರ ನೀಡಿದರೆ ಮಕ್ಕಳು ಉತ್ತಮ ರೀತಿಯಲ್ಲಿ ಬೆಳೆಯುತ್ತಾರೆ. ಇದಕ್ಕೆ ಈ ಕುಟುಂಬ ಸಾಕ್ಷಿಯಾಗಿದೆ. ಧಾರ್ಮಿಕ ಕಾರ್ಯಗಳಿಗೆ ವಿನಿಯೋಗ ಮಾಡುತ್ತಿರುವುದು ಉತ್ತಮ ಬೆಳವಣಿಗೆಯಾಗಿದೆ. ಇದರಿಂದ ಉತ್ತಮ ಸಮಾಜವನ್ನು ಕಂಡುಕೊಳ್ಳಲು ಸಾಧ್ಯವಿದೆ. ಇನ್ನೂ ಹೆಚ್ಚಿನ ಸೇವೆ ಮಾಡುವ ಶಕ್ತಿ ಯಲ್ಲಮ್ಮ ದೇವಿ ಇವರ ಕುಟುಂಬಕ್ಕೆ ನೀಡಲಿ ಎಂದು ಆಶೀರ್ವರ್ಚನ ನೀಡಿದರು.

ಚೇಗುಂಟದ ಡಾ.ಕ್ಷೀರಲಿಂಗ ಮಹಾಸ್ವಾಮಿಗಳು ಮಾತನಾಡಿ, ಭವನ ನಿರ್ಮಾಣದಿಂದ ಭಕ್ತರಿಗೆ ಅನುಕೂಲವಾಗಲಿದೆ. ಇದೊಂದು ಉತ್ತಮ ಸೇವಾ ಮನೋಭಾನೆಯ ಕಾರ್ಯವಾಗಿದೆ. ಅಲ್ಲದೆ ಧಾರ್ಮಿಕ ಸಭೆಯನ್ನು ಆಯೋಜನೆ ಮಾಡುವ ಮೂಲಕ ಜನರಲ್ಲಿ ಧರ್ಮ ಜಾಗೃತಿ ಮೂಡಿಸುವ ಕಾರ್ಯ ಶ್ರೇಷ್ಠವಾಗಿದ್ದೂ ಶಿಕ್ಷಣ ಪ್ರೇಮ, ಸಮಾಜ ಸೇವಕ ಸಿದ್ದೂ ಸಾವೂರ ಅವರು ತಮ್ಮ ತಂದೆ ತಾಯಿಗಳ ಸಹಕಾರದೊಂದಿಗೆ ಈ ವಿದಧ ಕಾರ್ಯ ಮಾಡಿದ್ದೂ ಅವರಲ್ಲಿನ ಧಾರ್ಮಿಕತೆಯ ಮಹತ್ವ ತಿಳಿಸುತ್ತದೆ ಎಂದು ಹೇಳಿದರು.

ಬಾಡಿಯಾಲ ಮೂಲ ಮಠದ ಚನ್ನವೀರ ಶಿವಾರ್ಚಾಯರು, ಚೇಗುಂಟಾದ ಕ್ಷೀರಲಿಂಗ ಮಹಾಸ್ವಾಮಿಗಳು, ಸಾವೂರದ ವೀರಯ್ಯ ಸ್ವಾಮಿಗಳು, ಹಿರಿಯ ನ್ಯಾಯವಾದಿಎಸ್.ಬಿ.ಪಾಟೀಲ, ಮುಂಖಡರಾದ ಶರಣಪ್ಪಗೌಡ ಕಾರೆಡ್ಡಿ ಮಲ್ಹಾರ, ಶರಣಿಕಕುಮಾರ ದೋಖಾ, ಬಸವರಾಜಯ್ಯ ಸ್ವಾಮಿ ಬದ್ದೇಪಲ್ಲಿ, ಸುಭಾಶ ದೋಖಾ, ಭೀಮಣ್ಣಗೌಡ ಪಾಟೀಲ ಕ್ಯಾತ್ನಾಳ, ಡಾ.ಸಿ.ಎಂ.ಪಾಟೀಲ, ನಿರಂಜನರೆಡ್ಡಿ ಪಾಟೀಲ ಶೆಟ್ಟಹಳ್ಳಿ, ವಿಶ್ವನಾಥರೆಡ್ಡಿ ಚಿಗಾನೂರು, ಬಸವರಾಜಪ್ಪಗೌಡ ಮಾಲಿ ಪಾಟೀಲ ಸಾವೂರು, ನಿವೃತ್ತಾ ಶಿಕ್ಷಕಿ ಸೀತಾಭಾಯಿ, ಶ್ರೀಧರ ಕುಲ್ಕರ್ಣಿ, ಸಿದ್ದು ಸಾವೂರು ಸೇರಿದಂತೆ ಇತರರಿದ್ದರು.

# ದೊಡ್ಡ ಕನಸು ಕಾಣಿ, ಉನ್ನತ ಗುರಿ ಸಾಧಿಸಿ:ಪ್ರೊ.ಬಟ್ಟು ಸತ್ಯನಾರಾಯಣ




**ಕಲಬುರಗಿ,ಫೆ.11–**"ದೊಡ್ಡ ಕನಸು ಕಾಣಿರಿ ಮತ್ತು ಜೀವನದಲ್ಲಿ ಉನ್ನತ ಗುರಿಗಳನ್ನು ಸಾಧಿಸಿ" ಎಂದು ಸಿಯುಕೆಯ ಕುಲಪತಿ ಪೊ. ಬಟ್ಟು ಸತ್ಯನಾರಾಯಣ ಹೇಳಿದರು.

ನಿನ್ನೆ ಅವರು ಸಿಯುಕೆಯ ವ್ಯವಹಾರ ಅಧ್ಯಯನ ವಿಭಾಗವು ಆಯೋಜಿಸಿದ್ದ ವೃತ್ತಿ ಸಮಾಲೋಚನೆ ಮತ್ತು ಉದ್ಯೋಗ ನಿಯೋಜನೆ ಕುರಿತು ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿದ ಮಾತನಾಡುತ್ತಿದ್ದರು. ಅವರು ಮುಂದುವರೆದು ಮಾತನಾಡಿ "ನಿಮ್ಮ ಪೀಳಿಗೆಗೆ ನಮ್ಮ ಪೀಳಿಗೆಗಿಂತ ಹೆಚ್ಚಿನ ಅವಕಾಶಗಳಿವೆ. ಹಿಂದಿನ ಜನರು ಸರ್ಕಾರಿ ಉದ್ಯೋಗಗಳನ್ನು ಮಾತ್ರ ನೋಡುತ್ತಿದ್ದರು. ಆದರೆ ಇಂದು ನಿಮಗೆ ಖಾಸಗಿ ಕೈಗಾರಿಕೆಗಳಲ್ಲಿ ಸಾಕಷ್ಟು ಉದ್ಯೋಗಾವಕಾಶಗಳಿವೆ ಮತ್ತು ನೀವು ನಿಮ್ಮ ಸ್ವಂತ ವ್ಯವಹಾರವನ್ನು ಪ್ರಾರಂಭಿಸಬಹುದು ಮತ್ತು ಉದ್ಯಮಿಯಾಗಬಹುದು. ಉನ್ನತ ಪದವಿಗಳನ್ನು ಹೊಂದಿರುವ ಕೆಲವರು ಕೆಳ ಹಂತದ ಉದ್ಯೋಗಗಳನ್ನು ಹುಡುಕುವುದು ದುರದೃಷ್ಟಕರ. ನೀವು ದೊಡ್ಡ ಕನಸು ಕಾಣಬೇಕು ಮತ್ತು ಜೀವನದಲ್ಲಿ ಉನ್ನತ ಗುರಿಗಳನ್ನು ಸಾಧಿಸಬೇಕು. ನೀವು ಜೀವನದಲ್ಲಿ ಒಳ್ಳೆಯ ಉದ್ಯೋಗ ಪಡೆದ ನಂತರ ನಿಮ್ಮ ಕಿರಿಯರಿಗೆ ಉದ್ಯೋಗಗಳನ್ನು ಪಡೆಯಲು ಸಹಾಯ ಮಾಡಿ, ಏಕೆಂದರೆ ಹಳೆಯ ವಿದ್ಯಾರ್ಥಿಗಳು ಉದ್ಯೋಗ ನಿಯೋಜನೆಯಲ್ಲಿ ಬಹಳ ಮುಖ್ಯವಾದ ಪಾತ್ರವನ್ನು ವಹಿಸುತ್ತಾರೆ" ಎಂದು ಹೇಳಿದರು.

ಬೆಳಗಾವಿಯ ಪೊಫಿಸಿಯಂಟ್ ಮೈಂಡ ಸಂಸ್ಥಾಪಕ ಮತ್ತು ಸಂಪನ್ಮೂಲ ವ್ಯಕ್ತಿ ಶ್ರೀ ಸುಹಾಸ್ ರಜಪೂತ್ ಮಾತನಾಡಿ, ಉದ್ಯಮದಲ್ಲಿ ಉದ್ಯೋಗಾವಕಾಶಗಳು ಯಾವಾಗಲೂ ಇರುತ್ತವೆ. ವಿದ್ಯಾರ್ಥಿಗಳು ತಮ್ಮ ಸಾಮರ್ಥ್ಯ ಮತ್ತು ಕೌಶಲ್ಯಗಳಲ್ಲಿ ವಿಶ್ವಾಸ ಹೊಂದಿರಬೇಕು. ಉದ್ಯೋಗ ಪಡೆಯಲು ವಿಶ್ವವಿದ್ಯಾಲಯವೇ ಎಲ್ಲವನ್ನೂ ಮಾಡುತ್ತದೆ ಎಂದು ನಿರೀಕ್ಷಿಸಬೇಡಿ. ಪ್ರತಿಷ್ಠಿತ ಸಂಸ್ಥೆಗಳಲ್ಲಿ ಉದ್ಯೋಗಾವಕಾಶದ ಎಲ್ಲಾ ಚಟುವಟಿಕೆಗಳನ್ನು ವಿದ್ಯಾರ್ಥಿಗಳೇ ನಿರ್ವಹಿಸುತ್ತಾರೆ. ಕಂಪನಿಗಳನ್ನು ಆಹ್ವಾನಿಸುವುದು, ಕಾರ್ಯಕ್ರಮಗಳನ್ನು ಆಯೋಜಿಸುವುದು, ಉದ್ಯೋಗಾವಕಾಶ ಪ್ರಕ್ರಿಯೆಯನ್ನು ನೋಡಿಕೊಳ್ಳುವುದು ವಿದ್ಯಾರ್ಥಿಗಳೇ ಮಾಡುತ್ತಾರೆ. ಮಾನವ ಸಂಪನ್ಮೂಲ ವ್ಯವಸ್ಥಾಪಕರೊಂದಿಗೆ ಸಂಪರ್ಕ ಸಾಧಿಸುವುದು ಮತ್ತು ಉದ್ಯೋಗವನ್ನು ಪಡೆಯುವುದು ಹೇಗೆ ಎಂದು ನೀವು ತಿಳಿದಿರಬೇಕು. ಲಿಂಇನ್ ಅತ್ಯಂತ ಶಕ್ತಿಶಾಲಿ ವೃತ್ತಿಪರ ನೆವಕಿರ್‌ಂಗ್ ಮತ್ತು ಉದ್ಯೋಗ ಹುಡುಕಾಟ ವೇದಿಕೆಯಾಗಿದೆ. ಉದ್ಯೋಗವನ್ನು ಪಡೆಯಲು ಸಾಮಾಜಿಕ ಜಾಲತಾಣಗಳನ್ನು ಹೇಗೆ ಬಳಸುವುದು ಎಂದು ನೀವು ತಿಳಿದಿರಬೇಕು ಮತ್ತು ಅವುಗಳನ್ನು ಸಮರ್ಪಕವಾಗಿ ಬಳಸಬೇಕು ಎಂದು ಹೇಳಿದರು.

ಡೀನ್ ಸ್ಕೂಲ್ ಆಫ್ ಬಿಸಿನೆಸ್ ಸ್ಟಡೀಸ್, ಪೊ. ಪಾಂಡುರಂಗ ಪಾತ್ತಿ ಮಾತನಾಡಿ, ಇಂದು ಅವಕಾಶಗಳು ಹೆಚ್ಚಾಗಿವೆ, ಅದೇ ಸಮಯದಲ್ಲಿ ಉದ್ಯೋಗವನ್ನು ಪಡೆಯುವುದು ಕೂಡ ತುಂಬಾ ಕಠಿಣವಾಗುತ್ತಿದೆ. ಸರಿಯಾದ ಉದ್ಯೋಗವನ್ನು ಪಡೆಯಲು ಸರಿಯಾದ ಕೌಶಲ್ಯಗಳನ್ನು ಬೆಳೆಸಿಕೊಳ್ಳಿ ಎಂದು ಹೇಳಿದರು.

ಇದಕ್ಕೂ ಮುನ್ನ ಕಾರ್ಯಕ್ರಮ ಸಂಯೋಜಕ ಡಾ. ಸೈಲಜಾ ಕೊನೆಕ ಪ್ರಾಸ್ತಾವಿಕವಾಗಿ ಮಾತನಾಡಿ "ಇಂದಿನ ಜಗತ್ತಿನಲ್ಲಿ ಕೇವಲ ಬಲವಾದ ಶೈಕ್ಷಣಿಕ ಹಿನ್ನೆಲೆ ಸಾಕಾಗುವುದಿಲ್ಲ, ವಿದ್ಯಾರ್ಥಿಗಳು ವ್ಯಕ್ತಿತ್ವ ಕೌಶಲ್ಯ ಮತ್ತು ವೃತ್ತಿಪರ ನೆವಕಿರ್‌ಂಗ್ ಹೊಂದಿರಬೇಕು. ಉದ್ಯೋಗ ನಿಯೋಜನೆಗಾಗಿ ವೃತ್ತಿಪರ ನೆವಕಿರ್‌ಂಗ್ ಬಹಳ ಮುಖ್ಯ ಪಾತ್ರ ವಹಿಸುತ್ತದೆ. ಉದ್ಯೋಗ ನಿಯೋಜನೆಗಾಗಿ ಎಲ್ಲಾ ವೃತ್ತಿಪರ ನೆವಕಿರ್‌ಂಗ್ ಕೌಶಲ್ಯಗಳನ್ನು ಕಲಿಯಲು ಈ ಕಾರ್ಯಾಗಾರವು ನಿಮಗೆ ಸಹಾಯ ಮಾಡುತ್ತದೆ" ಎಂದು ಹೇಳಿದರು.

ಡಾ. ಎಂ. ಜೋಹೈರ್ ಸ್ವಾಗತಿಸಿದರು, ಸಚಿನ್ ಸಿಂಗ್ ಶೇಕಾವತ್ ಕಾರ್ಯಕ್ರಮವನ್ನು ನಿರೂಪಿಸಿದರು ಮತ್ತು ಡಾ. ಶ್ರೀಲಕ್ಷ್ಮಿ ವಂದಿಸಿದರು. ಈ ಸಂದರ್ಭದಲ್ಲಿ ಪೊ. ವಿಜಯಕುಮಾರ, ಡಾ. ಗಣಪತಿ ಬಿ ಸಿನ್ನೂರ, ಡಾ. ಶುಷ್ಮಾ, ಡಾ. ಸಫಿಯಾ ಪರ್ವಿನ್, ಡಾ. ಮಹೇಂದ್ರ, ಡಾ. ಶಿಯವಕುಮಾರ ಬೆಳ್ಳಿ, ಡಾ. ನಿರಂಜನ್ ಪೂಜಾರ, ಇತರ ಅಧ್ಯಾಪಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಬಳ್ಳಾರಿ ಪೈರಿಂಗ್ ಪ್ರಕರಣ ಸಿಬಿಐಗೆ ನೀಡುವಂತೆ ಕೋರ್ಟ್ ಮೊರೆ: ಜನಾರ್ಧನರೆಡ್ಡಿ



**ಹೊಸಪೇಟೆ:ಫೆ,11–** ಬಳ್ಳಾರಿ ಬ್ಯಾನರ್ ಗಲಾಟೆ, ಪೈರಿಂಗ್ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಐಡಿ ತನಿಖೆಯ ಬಗ್ಗೆ ನನಗೆ ನಂಬಿಕೆಯಿಲ್ಲ. ಈ ಕುರಿತು ದಾಖಲೆಗಳನ್ನು ಸಂಗ್ರಹಿಸಿದ್ದು, ಸಿಬಿಐ ತನಿಖೆಗೆ ವಹಿಸಬೇಕು ಎಂದು ಕೋರಿ ಬರುವ ಎರಡು ದಿನದಲ್ಲಿ ಹೈಕೋರ್ಟ್ಗೆ ಅರ್ಜಿ ಸಲ್ಲಿಸಲಿದ್ದೇನೆ ಎಂದು ಗಂಗಾವತಿ ಶಾಸಕ ಜನಾರ್ದನ ರೆಡ್ಡಿ ಹೇಳಿದ್ದಾರೆ.

ಅವರು ನಿನ್ನೆ ಇಲ್ಲಿ ಸುದ್ದಿಗೋಷ್ಠಿ ನಡೆಸಿ ಈ ವಿಷಯ ತಿಳಿಸಿದರು. ಘಟನೆ ನಡೆದು ಒಂದು ತಿಂಗಳಾದರೂ ಯಾವುದೆ ಬೆಳವಣಿಗೆ ತನಿಖೆಯಲ್ಲಿ ಕಾಣುತ್ತಿಲ್ಲ ಅದಕ್ಕಾಗಿ ಸಿಬಿಐಗೆ ವಹಿಸಬೇಕಿದೆಂದರು.

ನನಗೆ ರಾಜಕೀಯವಾಗಿ ಪುನರ್ಜನ್ಮ ನೀಡಿದ ಗಂಗಾವತಿ ಕ್ಷೇತ್ರವನ್ನು ಬಿಟ್ಟುಕೊಡುವ ಪ್ರಶ್ನೆಯೇ ಇಲ್ಲ. ನಮ್ಮ ಸರ್ಕಾರ ಅಧಿಕಾರಕ್ಕೆ ಬರುವಾಗ ಗಂಗಾವತಿ, ಹೊಸಪೇಟೆ ಹಾಗೂ ಹಂಪಿಯನ್ನು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಈಗಿನಿಂದಲೇ ಯೋಜನೆ ರೂಪಿಸಿದ್ದೇನೆ. ಈ ಹಿಂದೆ ಹಾಕಿದ್ದ ಯೋಜನೆಗಳು ಕಾರ್ಯಗತ 'ಗೊಳ್ಳಲಿಲ್ಲ, ಮುಂದೆ ಆ ಯೋಜನೆಗಳೆಲ್ಲ ಜಾರಿಯಾಗಲಿವೆ ಎಂದರು.

ಹೈಕಮಾಂಡ್ ಹೆಸರು ಹೇಳುತ್ತಲೇ ಕುರ್ಚಿ ಬಿಡಲು ಸಿಎಂ ಸಿದ್ದರಾಮಯ್ಯ ಹಿಂದೇಟು ಹಾಕುತ್ತಿದ್ದಾರೆ. ಹೇಡಿತನದಿಂದ ಪ್ರಧಾನಿ ಅವರು ಸದನದಿಂದ ಪಲಾಯನ ಮಾಡಿದ್ದಾರೆ ಎಂದು ಸಿದ್ದರಾಮಯ್ಯ ಅಕ್ಷಮ್ಯ ಹೇಳಿಕೆಯ ಟ್ವಿಟ್ ಮಾಡಿದ್ದಾರೆ. ಆದರೆ, ಮಾತೆತ್ತಿದ್ದರೆ ಹೈಕಮಾಂಡ್ ಎನ್ನುತ್ತಾ ಕುರ್ಚಿಗೆ ಅಂಟಿಕೊಂಡಿರುವ ಸಿದ್ದರಾಮಯ್ಯ ಹೇಡಿಯೇ ಹೊರತು ಪ್ರಧಾನಿ ನರೇಂದ್ರ ಮೋದಿಯಲ್ಲ ಎಂದರು.

## ಮದುವೆ ಸಮಾರಂಭದಲ್ಲಿ ಪಿಸ್ತೂಲ್ ಹಿಡಿದು ನೃತ್ಯ: ಮತೀನ್ ಪಟೇಲ್ ವಿರುದ್ಧ ಪ್ರಕರಣ ದಾಖಲು

**ಕಲಬುರಗಿ,ಫೆ.11–**ಮದುವೆ ಸಮಾರಂಭದ ನಿಮಿತ್ಯ ನಡೆದ ಹಳದಿ ಕಾರ್ಯಕ್ರಮದಲ್ಲಿ ಕೈಯಲ್ಲಿ ಪರವಾನಿಗೆ ಹೊಂದಿರುವ ಪಿಸ್ತೂಲ್ ಹಾಗೂ ಟಾಯ್ ಸ್ಟನ್ ಗನ್ ಹಿಡಿದುಕೊಂಡು ನೃತ್ಯ ಮಾಡಿದ ಕಾಂಗ್ರೆಸ್ ಮುಖಂಡ ಮತೀನ್ ಪಟೇಲ್ ವಿರುದ್ಧ ನಗರದ ಚೌಕ್ ಪೊಲೀಸ್ ಠಾಣೆಯಲ್ಲಿ ಕಲಂ 30 ಆರ್ಮ್ಸ್ ಆಕ್ಟ್ ಅಡಿಯಲ್ಲಿ ಸ್ವಯಂ ಪ್ರೇರಿತ (ಸುಮೋಟೊ) ಪ್ರಕರಣ ದಾಖಲಾಗಿದೆ.ಕಲಬುರಗಿಯ ತಾಜ್ ನಗರ ಬಡಾವಣೆಯಲ್ಲಿರವ ಹೋಟೆಲ್‌ನಲ್ಲಿ ಜ.18 ರಂದು ರಾತ್ರಿ ನಡೆದ ತಮ್ಮ ಸಹೋದರಿಯ ಪುತ್ರಿಯ ಮದುವೆ ಸಮಾರಂಭದ ನಿಮಿತ್ಯ ನಡೆದ ಹಳದಿ ಕಾರ್ಯಕ್ರಮದಲ್ಲಿ ಮತೀನ್ ಪಟೇಲ್ ಅವರು ಕೈಯಲ್ಲಿ ಪಿಸ್ತೂಲ್ ಹಾಗೂ ಟಾಯ್ ಸ್ಟನ್ ಗನ್ ಹಿಡಿದು ನೃತ್ಯ ಮಾಡಿರುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿತ್ತು.

ಈ ಹಿನ್ನೆಲೆಯಲ್ಲಿ ಮತೀನ್ ಪಟೇಲ್ ವಿರುದ್ಧ ಸ್ವಯಂ ಪ್ರೇರಿತ ದೂರು ದಾಖಲಿಸಿಕೊಳ್ಳಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ತಿಳಿಸಿದ್ದಾರೆ.ಸಾರ್ವಜನಿಕವಾಗಿ ಯಾವುದೇ ರೀತಿಯ ಶಸ್ತ್ರಾಸ್ತ್ರಗಳನ್ನು ಪ್ರದರ್ಶಿಸುವುದು ಕಾನೂನಿನ ಪ್ರಕಾರ ಅಪರಾಧವಾಗಿದ್ದು, ಸಾರ್ವಜನಿಕರಿಗೆ ಭಯ, ಭೀತಿ ಉಂಟಾಗುವ ರೀತಿಯಲ್ಲಿ ಯಾವುದೇ ಶಸ್ತ್ರಾಸ್ತ್ರಗಳನ್ನು ಪ್ರದರ್ಶಿಸಬಾರದು ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಇಂತಹ ಯಾವುದೇ ರೀತಿಯ ಪೋಟೊಗಳನ್ನು ಹಂಚಿಕೊಳ್ಳಬಾರದು. ಇಂತಹ ಪೋಟೊಗಳನ್ನು ಹಂಚಿಕೊಳ್ಳುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದ್ದಾರೆ.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE